BV
ಕನ್ನಡ ದಿನಪತ್ರಿಕೆ
17 ಮಾರ್ಚ | ರವಿವಾರ
17 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನ್ನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 26 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ದೇಶದ 543 ಲೋಕಸಭಾ ಕ್ಷೇತ್ರಗಳಿಗೆ ಒಟ್ಟು 7 ಹಂತಗಳಲ್ಲಿ ಚುನಾವಣೆ

### ಕರ್ನಾಟಕದಲ್ಲಿ ಏಪ್ರಿಲ್ 26 ರಂದು ಮೊದಲ ಹಂತ, ಮೇ 7 ರಂದು ಎರಡನೇ ಹಂತದ ಮತದಾನ

ದೆಹಲಿ: ದೇಶದ 543 ಲೋಕಸಭಾ ಕ್ಷೇತ್ರಗಳಿಗೆ ಒಟ್ಟು 7 ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ಏಪ್ರಿಲ್ 19 ರಂದು ಮೊದಲ ಹಂತದ ಮತದಾನ ನಡೆಯಲಿದೆ. ಜೂನ್ 4ರಂದು ಮತ ಎಣಿಕೆ ಹಾಗೂ ಫಲಿತಾಂಶ ಪ್ರಕಟಗೊಳ್ಳಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಘೋಷಿಸಿದ್ದಾರೆ.

ದೆಹಲಿಯ ವಿಜ್ಞಾನ ಭವನದಲ್ಲಿ ನಡೆಯುತ್ತಿರುವ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಎರಡು ಹಂತದಲ್ಲಿ ಮತದಾನ ನಡೆಯಲಿದೆ. ದಕ್ಷಿಣ ಕರ್ನಾಟಕದಲ್ಲಿ ಎರಡನೇ ಹಂತದಲ್ಲಿ ಮತದಾನ ನಡೆಯಲಿದ್ದು, ಉತ್ತರ ಕರ್ನಾಟಕ ಮೂರನೇ ಹಂತದಲ್ಲಿ ಮತದಾನ ನಡೆಯಲಿದ್ದು, ಏಪ್ರಿಲ್ 26 ರಂದು ಮೊದಲ ಹಂತ, ಮೇ 7 ರಂದು ಎರಡನೇ ಹಂತದ ಮತದಾನ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ.

ದೇಶದಲ್ಲಿ 7 ಹಂತಗಳಲ್ಲಿ ಲೋಕಸಭೆ ಚುನಾವಣೆ ನಡೆಯಲಿದೆ. ಏಪ್ರಿಲ್ 19ರಂದು ಮೊದಲ ಹಂತ, ಏಪ್ರಿಲ್ 26ರಂದು ಎರಡನೇ ಹಂತ, ಮೇ 7ರಂದು ಮೂರನೇ ಹಂತ, ಮೇ 20 ರಂದು ನಾಲ್ಕನೇ ಹಂತ, ಮೇ 25 ರಂದು ಐದನೇ ಹಂತ, ಮೇ 25 ರಂದು ಆರನೇ ಹಂತ, ಜೂನ್ 1 ರಂದು ಏಳನೇ ಹಂತದ ಮತದಾನ ನಡೆಯಲಿದ್ದು, ಜೂನ್ 4ರಂದು ಮತ ಎಣಿಕೆ, ಫಲಿತಾಂಶ ಪ್ರಕಟಗೊಳ್ಳಲಿದೆ.



ಕರ್ನಾಟಕದಲ್ಲಿ ಮೇ 7 ರಂದು ಒಟ್ಟು 14 ಜಿಲ್ಲೆಗಳಲ್ಲಿ ಮತದಾನ: ಬೆಳಗಾವಿ, ಬಳ್ಳಾರಿ, ಚಿಕ್ಕೋಡಿ, ಹಾವೇರಿ–ಗದಗ, ಕಲಬುರಗಿ, ಬೀದರ್, ಹುಬ್ಬಳಿ–ಧಾರವಾಡ, ಕೊಪ್ಪಳ, ರಾಯಚೂರು, ಉತ್ತರ ಕನ್ನಡ, ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರ ಜಿಲ್ಲೆಗಳಲ್ಲಿ ಮೇ 7 ರಂದು ಮತದಾನ ನಡೆಯಲಿದೆ.

ಏಪ್ರಿಲ್ 26 ಒಟ್ಟು 14 ಜಿಲ್ಲೆಗಳಲ್ಲಿ ಮತದಾನ: ಎಂದು ಚಿತ್ರದುರ್ಗ, ಉಡುಪಿ–ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ, ಮೈಸೂರು–ಕೊಡಗು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ ಜಿಲ್ಲೆಗಳಲ್ಲಿ ಮತದಾನ ನಡೆಯಲಿದೆ.

ಚುನಾವಣೆಯಲ್ಲಿ ಹಿಂಸೆಗೆ ಅವಕಾಶ ನೀಡಲ್ಲ: ರಾಜೀವ್ ಕುಮಾರ್: ಎಲ್ಲಾ ಕಡೆ ಚೆಕ್ಪೋಸ್ಟ್ ಇರಲಿವೆ, ಡ್ರೋನ್ ಮೂಲಕ ಕಣ್ಗಾವಲು ಇರಿಸಲಾಗುವುದು. 24 ಗಂಟೆಗಳ ಕಂಟ್ರೋಲ್ ರೂಂಗಳು ಕರ್ತವ್ಯ ನಿರ್ವಹಿಸಲಿವೆ. ಸಿಆರ್‌ಪಿಎಫ್ ತುಕಡಿಗಳನ್ನು ನಿಯೋಜನೆ ಮಾಡಲಾಗುವುದು. ರೌಡಿಶೀಟರ್ಗಳ ಮೇಲೂ ತೀವ್ರ ನಿಗಾ ಇಡಲಾಗುವುದು. ಅಂತರಾಷ್ಟ್ರೀಯ ಗಡಿಯಲ್ಲೂ ಡ್ರೋಣ್ ಮೂಲಕ ಕಣ್ಗಾವಲು ಇರಿಸಲಾಗುವುದು ಎಂದರು.

ಆ್ಯಪ್ ಮೂಲಕ ತಮ್ಮ ಅಭ್ಯರ್ಥಿಗಳ ಮಾಹಿತಿ ಲಭ್ಯ ಇರಲಿದೆ. ಅಭ್ಯರ್ಥಿಗಳ ಅಪರಾಧ ಪ್ರಕರಣಗಳ ಕುರಿತು ಮಾಹಿತಿ ಆ್ಯಪ್ನಲ್ಲಿರಲಿದೆ.

ಚುನಾವಣಾ ಅಕ್ರಮಗಳನ್ನು ಮತದಾರ ಬಯಲು ಮಾಡಬಹುದು. ಆ್ಯಪ್ ಮೂಲಕ ಅಕ್ರಮದ ಫೋಟೋ, ವಿಡಿಯೋ ಅಪ್ಲೋಡ್ ಮಾಡಬಹುದು. ಕೂಡಲೇ ಅಕ್ರಮ ಎಸಗುವ ಅಭ್ಯರ್ಥಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ರಾಜೀವ್ ಕುಮಾರ್ ಹೇಳಿದರು.

ಮತಗಟ್ಟೆಗಳಲ್ಲಿ ಹಿಂಸಾಚಾರ ನಡೆದರೆ ಜಾಮೀನು ರಹಿತ ಕೇಸ್: ಕ್ರಿಮಿನಲ್ ಹಿನ್ನೆಲೆ ಇರುವ ವ್ಯಕ್ತಿಗಳು ಇದ್ದರೆ ಮಾಹಿತಿ ನೀಡಿ, ಸ್ಥಳೀಯ ಪತ್ರಿಕೆಗಳು ಮತ್ತು ಟಿವಿಗಳಲ್ಲಿ ಮಾಹಿತಿ ನೀಡಬೇಕು ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದರು. 11 ರಾಜ್ಯಗಳ ಚುನಾವಣೆಯಲ್ಲಿ 3400 ಕೋಟಿ ರೂ. ಸೀಜ್ ಮಾಡಲಾಗಿದೆ. ಚುನಾವಣೆ ವೇಳೆ ವಶಕ್ಕೆ 3400 ಕೋಟಿ ರೂಪಾಯಿ ಸೀಜ್ ಮಾಡಲಾಗಿದೆ. ಮತಗಟ್ಟೆಗಳಲ್ಲಿ ಹಿಂಸಾಚಾರ ನಡೆದರೆ ಜಾಮೀನು ರಹಿತ ಕೇಸ್ ದಾಖಲಿಸಲಾಗುವುದು ಎಂದರು.

ರೈಲು ನಿಲ್ದಾಣ, ವಿಮಾನ ನಿಲ್ದಾಣಗಳಲ್ಲಿ ತಪಾಸಣೆ: ರೈಲ್ವೆ ಸ್ಟೇಷನ್, ಏರ್ಪೋರ್ಟ್ಗಳಲ್ಲಿ ತಪಾಸಣೆ ನಡೆಯಲಿದೆ. ಹೆಲಿಕಾಪ್ಟರ್, ಖಾಸಗಿ ವಿಮಾನಗಳಲ್ಲೂ ಕೂಡ ತಪಾಸಣೆ ನಡೆಸಲಾಗುವುದು. ಎಲ್ಲಾ ವಾಹನಗಳನ್ನು ಕೂಡ ತಪಾಸಣೆ ನಡೆಸಲಾಗುವುದು ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದರು.

ವಿಭಜಿಸಲು ಪ್ರೇರೇಪಿಸುವ ರಾಜಕೀಯ ಭಾಷಣ ಮಾಡುವಂತಿಲ್ಲ: ವಿಭಜಿಸಲು ಪ್ರೇರೇಪಿಸುವ ರಾಜಕೀಯ ಭಾಷಣ ಮಾಡುವಂತಿಲ್ಲ ಎಂದು ರಾಜಕೀಯ ಪಕ್ಷಗಳಿಗೆ ಸಲಹೆ ನೀಲಾಗಿದೆ. ವಿಷಯ ಆಧಾರಿತ ಪ್ರಚಾರ ಮಾಡಬೇಕು. ದ್ವೇಷದ ಭಾಷಣಗಳಿಗೆ ಅವಕಾಶವಿಲ್ಲ. ಯಾವುದೇ ಜಾತಿ ಅಥವಾ ಧಾರ್ಮಿಕ ವಿಷಯದ ಮೂಲಕ ಮತಯಾಚನೆ ಮಾಡುವಂತಿಲ್ಲ. ಖಾಸಗಿ ಜೀವನದ ಯಾವುದೇ ಅಂಶವನ್ನು ಟೀಕಿಸುವುದಿಲ್ಲ. ಪರಿಶೀಲಿಸದ ಮತ್ತು ತಪ್ಪುದಾರಿಗೆಳೆಯುವ ಜಾಹೀರಾತು ಪ್ರಕಟಿಸಬಾರದು. ಜಾಹೀರಾತುಗಳನ್ನು ಸುದ್ದಿಯಾಗಿ ನೀಡುವಂತಿಲ್ಲ. ಪ್ರತಿಸ್ಪರ್ಧಿಗಳನ್ನು ನಿಂದಿಸುವ/ ಅವಮಾನಿಸುವ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳ ಮೇಲೆ ನಿರ್ಬಂಧ ಹೇರಲಾಗುವುದು. ಸ್ಟಾರ್ ಪ್ರಚಾರಕರು ಪ್ರಚಾರದ ಗೌರವ ಕಾಪಾಡಿಕೊಳ್ಳಬೇಕು ಎಂದರು.

## ಬೆಳಗಾವಿ ಪೊಲೀಸ್ ಆಯುಕ್ತರಾಗಿ ಇಡಾ ಮಾರ್ಟಿನ್ ಮಾರ್ಬನ್ಯಾಂಗ್ ನೇಮಕ



ಬೆಳಗಾವಿ: ನಗರ ಪೊಲೀಸ್ ಆಯುಕ್ತರಾಗಿ ಇಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರಿಗೆ ನೇಮಕ ಮಾಡಿ ಸರಕಾರ ಆದೇಶ ಹೊರಡಿಸಿದೆ.

ಇಡಾ ಮಾರ್ಟಿನ್ ಮಾರ್ಬ ನ್ಯಾಂಗ್ ಅವರು 2009 ನೇ ಬ್ಯಾಚ್‌ನ ಕರ್ನಾಟಕ ಕೇರಡರನ ಐಪಿಎಸ್ ಅಧಿಕಾರಿಯಾಗಿರುವ ಇವರು ಸದ್ಯ ನೇಮಕಾತಿ ವಿಭಾಗದಲ್ಲಿ ಡಿಐಜಿಪಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಮೊದಲು ಬಾಗಲಕೋಟೆ, ಯಾದಗಿರಿ, ಕಲಬುರಗಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ್ದಾರೆ.

ಪೊಲೀಸ್ ಆಯುಕ್ತರಾಗಿದ್ದ ಸಿದ್ದರಮಪ್ಪಾ ಎಸ್.ಎನ್ ಅವರು ಫೆ.29 ರಂದು ವಯೋನಿವೃತ್ತಿ ಹೊಂದಿದರು. ಅವರ ಜಾಗಕ್ಕೆ ಈಗ ಇಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರನ್ನು ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ.



## ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣ ಕಾಂಗ್ರೆಸ್ ನ ಒಳಸಂಚು: ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

ಹುಬ್ಬಳ್ಳಿ: ಬಿಜೆಪಿ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಒಳಸಂಚು ಅಡಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಶುಕ್ರವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಡಿಯೂರಪ್ಪ ಅವರ ವಯಸ್ಸೇನು, ಅವರ ಹಿರಿತನವೇನು, ಅವರ ಸ್ಥಾನಮಾನವೇನು, ಅವರ ವಿರುದ್ಧ ಈ ರೀತಿ ಷಡ್ಯಂತ್ರ ಮಾಡುವುದು ಎಂದರೆ ಎಂಥಾ ಅನ್ಯಾಯವಿದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಒಬ್ಬ ಪ್ರಭಾವಿ, ಹಿರಿಯ ರಾಜಕಾರಣಿ ಮೇಲೆ ಈ ರೀತಿ ಸುಳ್ಳು ದೂರು ದಾಖಲಿಸುವುದು ನಿಜಕ್ಕೂ ಅಕ್ಷಮ್ಯ, ಈ ಸಂಬಂಧ ಕಾನೂನು ರೀತಿ ತನಿಖೆ ಆಗುತ್ತದೆ. ಅವರು ಇದರಿಂದ ಹೊರಬರುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೇಶಾದ್ಯಂತ ಎಲ್ಲಾ ಯುವ ಮತದಾರರು ಪ್ರಧಾನಿ ಮೋದಿಯವರ ಅಭಿಮಾನಿಗಳಾಗಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸುತ್ತಾರೆಂಬ ವಿಶ್ವಾಸವಿದೆ. ಶೇ 90ರಷ್ಟು ಹೊಸ ಮತದಾರರಲ್ಲಿ ಮೋದಿಗೆ ಅಪಾರ ಅನುಯಾಯಿಗಳೂ ಇದ್ದಾರೆ. ಹಾಗಾಗಿ ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಲಿದೆ ಎಂದು ತಿಳಿಸಿದರು.

## ರಾಜ್ಯ ಸರ್ಕಾರ ಲೂಟಿಯಲ್ಲಿ ತೊಡಗಿದೆ, ಕಾಂಗ್ರೆಸ್ ಗೆ ಭ್ರಷ್ಟಾಚಾರವೇ ಆಕ್ಸಿಜನ್: ಪ್ರಧಾನಿ ಮೋದಿ



ಕಲಬುರಗಿ: ಪ್ರಧಾನಿ ನರೇಂದ್ರ ಮೋದಿ ಕಲಬುರಗಿಯಿಂದ ಲೋಕಸಭಾ ಚುನಾವಣೆಗೆ ಪ್ರಚಾರ ಆರಂಭಿಸಿದ್ದು, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ತವರಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಆಡಳಿತದಲ್ಲಿ ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ, ಜನತೆ ಸಂಕಷ್ಟದಲ್ಲಿ ಎದುರಿಸುತ್ತಿರುವಾಗ ಸರ್ಕಾರ ಲೂಟಿಯಲ್ಲಿ ತೊಡಗಿದೆ ಎಂದು ಮೋದಿ ಆರೋಪಿಸಿದ್ದಾರೆ.

ಜನತೆಗೆ ಕಾಂಗ್ರೆಸ್ ಬಗ್ಗೆ ಸತ್ಯ ಅರಿವಾಗಿದ್ದು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಲಿದ್ದಾರೆ ಎಂದು ಹೇಳಿರುವ ಮೋದಿ, ಕಾಂಗ್ರೆಸ್ ಎಷ್ಟೇ ಬಾರಿ ತಮ್ಮ ಉಡು‌ಪುಗಳನ್ನು ಬದಲಾಯಿಸಿದರೂ ಅವರ ದುಷ್ಕೃತ್ಯಗಳು ಬದಲಾಗುವುದಿಲ್ಲ, ಈ ಬಗ್ಗೆ ಜಾಗೃತರಾಗಿರುವ ಕರ್ನಾಟಕದ ಮಂದಿ ಕಾಂಗ್ರೆಸ್ ನಡೆಗೆ ಆಕ್ರೋಶಗೊಂಡಿದ್ದಾರೆ ಎಂದು ಮೋದಿ ವಾಗ್ದಾಳಿ ನಡೆಸಿದರು.

ಹಲವು ಅವಕಾಶಗಳು ಸಿಕ್ಕಿದ್ದರೂ ಕಾಂಗ್ರೆಸ್ ಸುಧಾರಣೆ ಮಾಡಿಕೊಳ್ಳುವುದಕ್ಕೆ ತಯಾರಿಲ್ಲ. ಸಮಾಜಘಾತುಕ ಶಕ್ತಿಗಳಿಗೆ ರಾಜ್ಯದಲ್ಲಿ ಬಹಿರಂಗವಾಗಿಯೇ ಬೆಂಬಲ ಸಿಗುತ್ತಿದೆ. ಜನರ ಮನಸ್ಸಿನಲ್ಲಿ ಭಯ ಉಂಟುಮಾಡಲಾಗುತ್ತಿದೆ. ಜನರು ಆತಂಕಗೊಂಡಿರುವಾಗ ಕಾಂಗ್ರೆಸ್ ಲೂಟಿಯಲ್ಲಿ ನಿರತವಾಗಿದೆ. ಕಲ್ಲಿದ್ದಲಿನ ಕಪ್ಪುತನವನ್ನು ಹೋಗಲಾಡಿಸಬಹುದು ಆದ‌ರೆ ಭ್ರಷ್ಟಾಚಾರವನ್ನು ಕಾಂಗ್ರೆಸ್‌ನಿಂದ ಬೇರ್ಪಡಿಸಲು ಸಾಧ್ಯವಿಲ್ಲ. ಇಂತಹವರಿಗೆ ಭ್ರಷ್ಟಾಚಾರವೇ ಆಮ್ಲಜನಕ ಎಂದು ಮೋದಿ ಹೇಳಿದ್ದಾರೆ.

ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ, ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ ಎಸ್ ಯಡಿಯೂರಪ್ಪ, ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಭಗವಂತ ಖೂಬಾ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ, ಗುಲ್ಬರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಉಮೇಶ ಜಾಧವ್ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವರಿಷ್ಠರು ಸೂಚಿಸಿದ್ದಕ್ಕೆ ಸ್ಪರ್ಧಿಸಿರುವೆ: ಬೊಮ್ಮಾಯಿ



ಹಾವೇರಿ: 'ಈಶ್ವರಪ್ಪ ಅವರು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವ ವಿಚಾರ ನನಗೆ ಗೊತ್ತಿಲ್ಲ. ಅವರು ನನಗಿಂತ ಹಿರಿಯರಿದ್ದಾರೆ. ಪಕ್ಷವನ್ನು ಕಟ್ಟಿ ಬೆಳೆಸಿದವರಲ್ಲಿ ಪ್ರಮುಖರಾಗಿದ್ದಾರೆ. ಅವರೊಂದಿಗೆ ಖುದ್ದಾಗಿ ಮಾತನಾಡುತ್ತೇನೆ' ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದರು.

ಶುಕ್ರವಾರ ಮಾಧ್ಯಮದವರ ‌ಜೊತೆ ಮಾತನಾಡಿದ ಅವರು, ಹಾವೇರಿ ಕ್ಷೇತ್ರಕ್ಕೆ ನಾನು ಆಕಾಂಕ್ಷಿಯಾಗಿರಲಿಲ್ಲ. ಸಂಸದೀಯ ಮಂಡಳಿ ಸಭೆಯಲ್ಲಿ ಏನೇನು ಆಗಿದೆ ಅದೆಲ್ಲವೂ ಈಶ್ವರಪ್ಪನವರಿಗೆ ಗೊತ್ತಿದೆ.

ನನ್ನ ಹೆಸರು ಇರಲಿಲ್ಲ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಡ್ಡಾ, ಅಮಿತ್ ಶಾ ಅವರೇ ನೀನು ಸ್ಪರ್ಧಿಸುವ ಅನಿವಾರ್ಯತೆಯಿದೆ ಎಂದು ಹೇಳಿದರು ಎಂದರು.

ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಬೇರೆಯವ‌ರಿಗೆ ಅವಕಾಶ ಕೊಡಿ ಎಂದಿದ್ದೆ. ಈಶ್ವರಪ್ಪ ಅವರು ಪಕ್ಷದಲ್ಲಿ ಶಿಸ್ತಿನ ಸಿಪಾಯಿಯಾಗಿದ್ದಾರೆ. ಆದರೆ, ಅದು ವರಿಷ್ಠರ ತೀರ್ಮಾನ. ಪಕ್ಷ ಅವರಿಗೆ ಮೋಸ ಮಾಡುವುದಿಲ್ಲ ಎಂದು ತಿಳಿಸಿದರು.

ಶಿಗ್ಗಾವಿಯೊಂದಿಗೆ ನನಗೆ ಭಾವನಾತ್ಮಕ ಸಂಬಂಧವಿದೆ. ಎಲ್ಲಾ ತಾಲ್ಲೂಕುಗಳ ಅಭಿವೃದ್ಧಿ ಜತೆಗೆ ಶಿಗ್ಗಾವಿ ಅಭಿವೃದ್ಧಿಗೂ ಒತ್ತು ನೀಡುತ್ತೇನೆ.

ಶಿಗ್ಗಾವಿ ಬೈ ಎಲೆಕ್ಷನ್ ನಡೆದರೆ ಪುತ್ರ ಭರತ್ ಬೊಮ್ಮಾಯಿಗೆ ಟಿಕೆಟ್ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈಗ ನಾನಿನ್ನೂ ಸ್ಪರ್ಧೆ ಮಾಡಿ ಲೋಕಸಭಾ ಚುನಾವಣೆ ಗೆಲ್ಲಬೇಕು. ಬಳಿಕ ಶಿಗ್ಗಾವಿಗೆ ಉಪಚುನಾವಣೆ ನಡೆಯಲಿದೆ. ಊಹೆ ಮಾಡಿ ಈಗಲೇ ನಾನು ಹೇಳಲು ಆಗಲ್ಲ. ಆ ಸಂದರ್ಭದಲ್ಲಿ ಜನರ ಅಭಿಪ್ರಾಯ, ಪಕ್ಷದ ಕೇಳಬೇಕು ಎಂದು ಹೇಳಿದರು.

ಮಾಜಿ ಶಾಸಕ ನೆಹರು ಓಲೇಕಾರ ಅವರ ಮನವೊಲಿಸುವ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಟಿಕೆಟ್ ಸಿಕ್ಕಿದ ನಂತರ ಜಿಲ್ಲೆಗೆ ಮೊದಲ ಬಾರಿಗೆ ಬಂದಿದ್ದೇನೆ.

ಸ್ಥಳೀಯ ನಾಯಕರೊಂದಿಗೆ ಚರ್ಚಿಸಿ, ಅಭಿಪ್ರಾಯ ತಿಳಿದುಕೊಂಡು ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇನೆ. ನನಗೆ ಯಾರ ಬಗ್ಗೆಯೂ ದ್ವೇಷ ಇಲ್ಲ ಎಂದರು.

## ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಪಕ್ಷೇತರನಾಗಿ ನನ್ನ ಸ್ಪರ್ಧೆ ಖಚಿತ : ಕೆ.ಎಸ್. ಈಶ್ವರಪ್ಪ



ಶಿವಮೊಗ್ಗ: ಶಿವಮೊಗ್ಗ ಲೋಕಸಭೆ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ನನ್ನ ಸ್ಪರ್ಧೆ ಖಚಿತ ಎಂದು ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ. ಪಕ್ಷ ತಂದೆ, ಮಕ್ಕಳ ಕೈಗಗೆ ಸಿಕ್ಕಿದೆ. ಇದರಿಂದ ಕಾರ್ಯಕರ್ತರು ಪರದಾಡುವಂತಾಗಿದೆ. ಪಕ್ಷ ಉಳಿಸಲು ನನ್ನ ಹೋರಾಟ ಎಂದರು. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ನನಗೆ ಕೊಡಲಿಲ್ಲ. ಲಿಂಗಾಯ ಶಾಸಕ ಬಸನಗೌಡ ಪಾಟೀಲ್, ಒಕ್ಕಲಿಗ ನಾಯಕ ಸಿ.ಟಿ ರವಿಗೆ ಯಾಕೆ ಕೊಡಲಿಲ್ಲ. ಸಂಘಟನೆ ದೃಷ್ಟಿಯಿಂದ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಹುದ್ದೆ ನೀಡಬೇಕಿತ್ತು ಎಂದರು. ನಾನು ಹಿಂದುತ್ವದ ವಿಚಾರದ ಮೇಲೆ ರಾಜಕಾರಣ ಮಾಡುತ್ತೇನೆ. ರಾಘವೇಂದ್ರ ಲಿಂಗಾಯತ ಅಂತಾ ಚುನಾವಣೆ ಮಾಡುತ್ತಾರೆ. ಅವ‌ರಿಗೆ ಮಾತ್ರ ಲಿಂಗಾಯತರು ಸೀಮಿತವಾಗಿಲ್ಲ ಎಂದು ಹೇಳಿದರು.

## ಬೆಳಗಾವಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರಕ್ಕೆ ನಾವಲಗಟ್ಟಿ ಅಧ್ಯಕ್ಷ



ಬೆಳಗಾವಿ: ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ರಚಿಸಿರುವ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಾಗೂ ತಾಲ್ಲೂಕು ಮಟ್ಟದ ಸಮಿತಿಗೆ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಜಿಲ್ಲಾಮಟ್ಟದ ಪ್ರಾಧಿಕಾರದ ಅಧ್ಯಕ್ಷರಾಗಿ ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ಅವರನ್ನು ನೇಮಿಸಲಾಗಿದೆ.

ವಿಧಾನಸಭಾ ಚುನಾವಣೆಯ ಪೂರ್ವದಲ್ಲಿ ಕಾಂಗ್ರೆಸ್ ಘೋಷಣೆ ಮಾಡಿದ್ದ ಐದು ಗ್ಯಾರಂಟಿ ಯೋಜನೆಯನ್ನು ಸರಕಾರ ರಚನೆಯಾದ ಮೇಲೆ ಅನುಷ್ಠಾನ ಮಾಡಿದ್ದು, ಅದನ್ನು ಜನರಿಗೆ ತಲುಪಿಸಲು ನಾವಲಗಟ್ಟಿಗೆ ಪ್ರಾಧಿಕಾರದ ಅಧ್ಯಕ್ಷರಾಗಿ ನೇಮಕ ಮಾಡಿದೆ. ಬೆಳಗಾವಿ ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾಗಿ ಮಲ್ಲಪ್ಪ ಮುರಗೋಡ್, ಶೇಖರಪ್ಪ ಇಟ್ಟಿ, ಬಸವರಾಜ್ ನಾಯ್ಕ, ಅಮೋಲ್ ಬೆಣ್ಣೆ, ರುದ್ರಯ್ಯ (ಕಾಶಿ) ಎಂ. ಹಿರೇಮಠ ನೇಮಕಮಾಡಲಾಗಿದೆ. ಅಲ್ಲದೇ ಸದಸ್ಯರಾಗಿ ಅನಿಲಕುಮಾರ್ ದಳವಾಯಿ, ಮಹಾಂತೇಶ ಕೆ.ಕದಾಡಿ, ಬೈರು ಟಿ. ಕಾಂಬ್ಳೆ, ಸೂರ್ಯಕಾಂತ್ ಕೆ. ಕುಲಕರ್ಣಿ, ಗಂಗಪ್ಪ ಬಿ. ಹುರಕಡ್ಡಿ , ಮಹಾಂತೇಶ ಕಳ್ಳಿ ಬಡ್ಡಿ, ಶಿವಕುಮಾರ್ ರಾಠೋಡ್, ಜಿ.ಬಿ. ರಂಗನಗೌಡರ್, ಗೋಪಾಲ್ ದಳವಾಯಿ, ಶಾನುಲ್ ತಹಶೀಲ್ದಾರ್, ರಮೇಶ್ ಪಾಟೀಲ್, ಸಿದ್ಧಾರ್ಥ ಶಿಂಗೆ, ವಿಜಯ್ ಅಕ್ಕಿವಾಟೆ, ಅರ್ಜುನ್ ಬಂಡಗರ್, ಯೋಗಿತಾ ಆರ್. ಕಾಂಬ್ಳೆ ಆಯ್ಕೆಯಾಗಿದ್ದಾರೆ. ಇವರ ಅಧಿಕಾರಾವಧಿ ಎರಡು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇರಲಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಸರ್ಕಾರದ ಕಾರ್ಯದರ್ಶಿ ಡಾ. ಪ್ರಕಾಶ್ ಜಿ.ಸಿ ಆದೇಶದಲ್ಲಿ ತಿಳಿಸಿದ್ದಾರೆ.

## ಕೋಟಿ ಕೋಟಿ ರೂಪಾಯಿ ತೆರಿಗೆ ಬಾಕಿ ಉಳಿಸಿಕೊಂಡ ಮಂತ್ರಿಮಾಲ್: ಬಿಬಿಎಂಪಿಯಿಂದ ಶಾಕ್

ಬೆಂಗಳೂರು: 61 ಕೋಟಿ ರೂಪಾಯಿ ತೆರಿಗೆ ಬಾಕಿ ಉಳಿಸಿಕೊಂಡ ಹಿನ್ನೆಲೆಯಲ್ಲಿ ಮಲ್ಲೇಶ್ವರಂನಲ್ಲಿನ ಮಂತ್ರಿಮಾಲ್ಗೆ ಬಿಬಿಎಂಪಿ ಅಧಿಕಾರಿಗಳು ಮತ್ತೆ ಬೀಗ ಜಡಿದಿದ್ದಾರೆ.

ಮಂತ್ರಿಮಾಲ್ ಬರೋಬ್ಬರಿ 61 ಕೋಟಿ ಟ್ಯಾಕ್ಸ್ ಬಾಕಿ ಉಳಿಸಿಕೊಂಡಿದೆ.

ಒನ್ ಟೈಮ್ ಸೆಟ್ಲ್ಮೆಂಟ್ಗೆ ಅವಕಾಶ ಕೊಟ್ಟಿದ್ದ ಬಿಬಿಎಂಪಿ 20 ಕೋಟಿ ರೂಪಾಯಿಗಳ ಆಫರ್ ಕೊಟ್ಟು 40 ಕೋಟಿ ರೂಪಾಯಿ ಪಾವತಿ ಮಾಡಲು ತಿಳಿಸಲಾಗಿ‌ತ್ತು. ಹಣ ಪಾವತಿ ಮಾಡದ ಕಾರಣ ಸದ್ಯ ಲೈಸೆನ್ಸ್ ಕ್ಯಾನ್ಸಲ್ ಮಾಡಿ, ಮಾಲ್ ಅನ್ನು ಸೀಜ್ ಮಾಡಲಾಗಿದೆ.

ಈ ಹಿಂದೆ ಇದೇ ರೀತಿ ಅನೇಕ ಬಾರಿ ತೆರಿಗೆ ಪಾವತಿ ಮಾಡದ ಸಂಬಂಧಕ್ಕೆ ಮಂತ್ರಿಮಾಲ್ಗೆ ಬಿಬಿಎಂಪಿ ಅಧಿಕಾರಿಗಳು ಬೀಗ ಹಾಕಿದ್ದರು.

ಹೀಗಾಗಿ ಇಂದು ಬೆಳಗ್ಗೆ ಮಾಲ್ಗೆ ಭೇಟಿ ಕೊಟ್ಟ ಅಧಿಕಾರಿಗಳು ಹಾಗ ತಾನೇ ಕೆಲಸಕ್ಕೆ ಬಂದಿದ್ದ ಸಿಬ್ಬಂದಿಯನ್ನೆಲ್ಲ ಹೊರಗೆ



ಕಳುಹಿಸಿದ್ದಾರೆ.

ಬಳಿಕ ಮಾಲ್ನ ಮುಖ್ಯದ್ವಾರಕ್ಕೆ ಬೀಗ ಜಡಿದಿದ್ದಾರೆ. ಎಂದಿನಂತೆ ಕೆಲಸಕ್ಕೆ ಬಂದಿದ್ದ ಸಿಬ್ಬಂದಿ ಹಾಗೂ ವಿವಿಧ ಮಳಿಗೆಗಳ ಮಾಲೀಕರು ಏನು ದೋಚದೇ ಕಂಗಲಾಗಿ ಹೊರಗೆ ಕೂಳಿತ್ತಿದ್ದಾರೆ.

ಮಾರ್ಷಲ್ ಹಾಗೂ ಪೊಲೀಸರ ಬಿಗಿ ಭದ್ರತೆಯಲ್ಲಿ ಅಧಿಕಾರಿಗಳು ಮಾಲ್ಗೆ ಬೀಗ ಹಾಕಿದ್ದಾರೆ. ಮೊದಲಿಂದಲೂ ಟ್ಯಾಕ್ಸ್ ಬಾಕಿ ಉಳಿಸಿಕೊಂಡಿದ್ದ ಮಂತ್ರಿಮಾಲ್ಗೆ ಒನ್ ಟೈಮ್ ಸೆಟ್ಲ್ಮೆಂಟ್ಗೆ ಬಿಬಿಎಂಪಿ ಅವಕಾಶ ಕೊಟ್ಟಿತ್ತು.

ಆದರೂ ತೆರಿಗೆ ಪಾವತಿ ಮಾಡದಿದ್ದ ಕಾರಣ ಮತ್ತೆ ಬೀಗ ಹಾಕಲಾಗಿದೆ. ಪ್ರತಿ ಬಾರಿಯು ಈ ರೀತಿ ಆದಾಗ ಕೋರ್ಟ್ ಮೆಟ್ಟಿಲೇರಿ ತಡೆಯಾಜ್ಞೆ ತರುತ್ತಿದ್ದರು.

ಮಾಲ್ಗೆ ಶಾಪಿಂಗ್ಗಾಗಿ ಬಂದ ಗ್ರಾಹಕರಿಗೆ ನಿರಾಶೆಯಾಗಿದ್ದು ಸಿನಿಮಾ ಟಿಕೆಟ್ ಬುಕ್ ಮಾಡಿದವರು ಮಾಲ್ಗೆ ಬಂದಾಗ ಶಾಕ್ ಆಗಿದ್ದಾರೆ.

ಟಿಕೆಟ್ ಬುಕ್ ಮಾಡಿದವರಿಗೆ ಹಣ ವಾಪಸ್ ಬರುತ್ತೋ, ಇಲ್ವೋ ಎಂಬ ಗೊಂದಲದಲ್ಲಿದ್ದಾರೆ. ಕೆಲವು ಗ್ರಾಹಕರಿಗೆ ಯಾವುದೇ ಮಾಹಿತಿ ಇಲ್ಲದೇ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಿಬಿಎಂಪಿ ಅಧಿಕಾರಿಗಳ ಜೊತೆ ಕ್ಲಾರಿಟಿ ತಗೊಂಡು ಜನ ಹಿಂದಿರುಗುತ್ತಿದ್ದಾರೆ. ಮಾಲ್ಗೆ ಬೀಗ ಹಾಕಿರುವುದರ ಬಗ್ಗೆ ಬಿಬಿಎಂಪಿ ವಾಹನದಲ್ಲಿ ಮೈಕ್ ಮೂಲಕ ಅಧಿಕಾರಿಗಳು ಅನೌನ್ಸ್ ಮಾಡುತ್ತಿದ್ದಾರೆ. ಕೆಲ ಗ್ರಾಹಕರು ಬೀಗ ತೆಗೆಯುತ್ತಾರೆ ಎಂದು ಕಾದು ಕುಳಿತ್ತಿದ್ದಾರೆ.

## ಅನಂತ್ ಕುಮಾರ್ ಹೆಗಡೆ ವಿರುದ್ಧದ ಎಫ್‌ಐಆರ್‌ಗೆ ಹೈಕೋರ್ಟ್ ತಡೆ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿ ಸಂಸದ ಅನಂತ ಕುಮಾರ ಹೆಗಡೆ ವಿರುದ್ಧ ಮುಂಡಗೋಡು ಠಾಣಾ ಪೊಲೀಸರು ದಾಖಲಿಸಿದ್ದ ಎಫ್‌ಐಆರ್‌ಗೆ ಹೈಕೋರ್ಟ್ ಶುಕ್ರವಾರ ತಡೆ ನೀಡಿದೆ.

ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಅನಂತ ಕುಮಾರ ಹೆಗಡೆ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ನೇತೃತ್ವದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಅರ್ಜಿದಾರರ ಪರ ವಕೀಲ ಎಚ್ ಪವನಚಂದ್ರ ಶೆಟ್ಟಿ ವಾದ ಆಲಿಸಿದ ಪೀಠವು ಪ್ರತಿವಾದಿಗಳಾದ ಮುಂಡಗೋಡು ಠಾಣಾ ಪೊಲೀಸರು ಮತ್ತು ದೂರುದಾರ ಕಾನ್‌ಸ್ಟೆಬಲ್ ಗಣಪತಿ ಬಸವಂತಪ್ಪ ಹುನ್ನಳ್ಳಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿತು.

## ಕರ್ನಾಟಕದಲ್ಲಿ 2 ಹಂತದಲ್ಲಿ ಲೋಕಸಭಾ ಚುನಾವಣೆ

ನವದೆಹಲಿ: ಕರ್ನಾಟಕದ 28 ಲೋಕಸಭಾ ಕ್ಷೇತ್ರಗಳಿಗೆ ಕಳೆದ ಬಾರಿಯಂತೆ ಈ ಬಾರಿಯೂ ಏಪ್ರಿಲ್ 26 ಮತ್ತು ಮೇ 7ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ.

ಏ.26ರಂದು 14 ಲೋಕಸಭಾ ಕ್ಷೇತ್ರಗಳಿಗೆ ಹಾಗೂ ಮೇ 7ರಂದು ಉಳಿದ 14 ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆದು, ಜೂನ್4ರಂದು ಫಲಿತಾಂಶ ಪ್ರಕಟಗೊಳ್ಳಲಿದೆ. ಮೊದಲ ಹಂತ 14 ಲೋಕಸಭಾ ಕ್ಷೇತ್ರಗಳಿಗೆ ಮಾ.28ರಂದು ಅಧಿಸೂಚನೆ ಹೊರಡಲಿದ್ದು, ಮಾ. 28ರಿಂದ ಏಪ್ರಿಲ್ 4 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಮೇ 5ರಂದು ನಾಮಪತ್ರಗಳ ಪರಿಶೀಲನೆ ನಡೆದು, ಏ.8ಕ್ಕೆ ನಾಮಪತ್ರ



ಹಿಂಪಡೆಯಲು ಕೊನೆಯ ದಿನವಾಗಿದೆ.

ಎರಡನೇ ಹಂತದ ಮತದಾನ ನಡೆಯಲಿರುವ ಮೇ 7ರ 14 ಲೋಕಸಭಾ ಕ್ಷೇತ್ರಗಳಿಗೆ ಏ.12ರಂದು ಅಸೂಚನೆ ಹೊರಡಲಿದೆ. ಏ. 12ರಿಂದ ಏ.19ರವರೆಗೆ ನಾಮಪತ್ರ ಸಲ್ಲಿಸಬಹುದು. ಏ.20ರಂದು ನಾಮಪತ್ರಗಳ ಪರಿಶೀಲನೆ, ಏ.22ಕ್ಕೆ ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ಮೇ 7ಕ್ಕೆ 2ನೇ ಹಂತದ ಚುನಾವಣೆ ನಡೆಯಲಿದೆ. ರಾಜ್ಯದಲ್ಲಿ ಈ ಬಾರಿ ಒಟ್ಟು – 5,37,85,815 ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಮುಕ್ತ ಮತ್ತು ನ್ಯಾಯಸಮ್ಮತ ಮತದಾನ ನಡೆಸಲು ಆಯೋಗ ಎಲ್ಲಾ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಕೇಂದ್ರ ಚುನಾವಣಾ ಮುಖ್ಯ ಆಯುಕ್ತ ರಾಜೀವ್ಕುಮಾರ್ ತಿಳಿಸಿದರು.

ಏ.26ರಂದು ಮೊದಲ ಹಂತದ ಮತದಾನವು ಉಡು‌ಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು , ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

ಮೇ 7ರಂದು ಎರಡನೇ ಹಂತದ ಮತದಾನವು ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರ್ಗಿ, ರಾಯಚೂರು, ಬೀದರ್, ಕೊಪ್ಪಳ,ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರ ಕನ್ನಡ, ದಾವಣಗೆರೆ, ಶಿವಮೊಗ್ಗ ಕ್ಷೇತ್ರಗಳಿಗೆ ನಡೆಯಲಿದೆ.

ರಾಜ್ಯದ ಒಟ್ಟು 5,37,85,815 ಮತದಾರರಿದ್ದು, ಪುರುಷರು –2,69,33,750, ಮಹಿಳೆಯರು – 2,68,47,145, ಇತರೆ ಮತದಾರರು 4,920 ಸಂಖ್ಯೆಗೆ ತಲುಪಿದೆ. ರಾಜ್ಯದಲ್ಲಿ ಒಟ್ಟು 58,834 ಮತಗಟ್ಟೆಗಳ ಸಂಖ್ಯೆ ಇದೆ.

## ಲೈಂಗಿಕ ಕಿರುಕುಳ: ಎಫ್‌ಐಆರ್ ದಾಖಲು



ಬೆಂಗಳೂರು: ಸಿಲಿಕಾನ್ ಸಿಟಿಯ ಮೆಟ್ರೋ ಸಿಬ್ಬಂದಿ ಯಾವುದಾದರೂ ಯಡವಟ್ಟು ಮಾಡುತ್ತಲೇ ಇರುತ್ತಾರೆ. ಇದಕ್ಕೆ ಪೂರಕ ಎನ್ನುವಂತೆ ಮೆಟ್ರೋದ ಹಿರಿಯ ಅಧಿಕಾ‌ರಿಯೊಬ್ಬರ ವಿರುದ್ಧ ಮಹಿಳಾ ಸಹೋದ್ಯೋಗಿಗೆ ಲೈಗಿಂಕ ಕಿರುಕುಳ ನೀಡಿದ ಆರೋಪ ಕೇಳಿ ಬಂದಿದೆ.

ರಾಜಾಜಿನಗರದ ಮೆಟ್ರೋ ನಿಲ್ದಾಣ ಗಜೇಂದ್ರ ಪಿ ವಿರುದ್ಧ ಈ ಆರೋಪ ಮಾಡಲಾಗಿದೆ. ಈ ಸಂಬಂಧ ಸುಬ್ರಹ್ಮಣ್ಯ ನಗರದ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ. ಆರೋಪ ಕೇಳಿ ಬಂದಿರುವ ಹಿರಿಯ ಅಧಿಕಾರಿ ಮಹಿಳಾ ಸಿಬ್ಬಂದಿಗೆ ಅಶ್ಲೀಲ ಪದಗಳಿಂದ ನಿಂದಿಸುತ್ತಿದ್ದರು. ಅವರ ಮೈ, ಕೈ ಮುಟ್ಟಿ ಲೈಗಿಂಕ ಕಿರುಕುಳ ನೀಡುತ್ತಿದ್ದರು. ತಮ್ಮ ಜೊತೆ ಸರಿಯಾಗಿ ಸಹಕ‌ರಿಸದ ಮಹಿಳೆಯರಿಗೆ ಬೇರೆ ಕಡೆ ವರ್ಗಾವಣೆ ಮಾಡುವುದಾಗಿ ಬೆದ‌ರಿಕೆ ಹಾಕುತ್ತಿದ್ದು ಎಂಬ ಆರೋಪ ಕೇಳಿಬಂದಿದೆ.

ಅಧಿಕಾರಿ ಕಾಟ ಕೊಡುತ್ತಿದ್ದಾನೆ ಎಂದು ಸೆಕ್ಯೂರಿಟಿ ಏಜೆನ್ಸಿ ಮಾಲೀಕನಿಗೆ ಹೇಳಿದರೆ ಅವರು ಕೂಡ ಸಹಕರಿಸುವಂತೆ ಒತ್ತಾಯ ಮಾಡುತ್ತಿದ್ದರು. ಒಂದು ವೇಳೆ ಅವರ ಜೊತೆ ಸಹಕರಿಸಿಲ್ಲ ಎಂದರೆ ಕೆಲಸದಿಂದ ತೆಗೆಯುತ್ತೇವೆ ಎಂದು ಹೇಳುತ್ತಿದ್ದರು ಎಂದರು ದೂರಿನಲ್ಲಿ ಉಲ್ಲೇಖ ಮಾಡಲಾಗಿದೆ. ಮಹಿಳೆಯರು ಬಿಎಂಆರ್‌ಸಿಎಲ್ನ ಹಿರಿಯ ಅಧಿಕಾರಿಗಳಿಗೂ ದೂರು ನೀಡಿದ್ದಾರೆ.

# 7ನೇ ವೇತನ ಆಯೋಗದ ವರದಿ ಸಲ್ಲಿಕೆ: ಸಲಹೆ ಆಧರಿಸಿ ಸರ್ಕಾರ ತೀರ್ಮಾನ: ಸಿಎಂ ಭರವಸೆ

ಬೆಂಗಳೂರು: ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ ರಾವ್ ಅಧ್ಯಕ್ಷತೆಯ ರಾಜ್ಯದ ಏಳನೇ ವೇತನ ಆಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ವರದಿ ಸಲ್ಲಿಕೆ ಮಾಡಿದೆ.

ರಾಜ್ಯ ಸರ್ಕಾರಿ ನೌಕರರ ವೇತನ ಪರಿಷ್ಕರಣೆ ಕುರಿತು ಅಧ್ಯಯನ ಮಾಡಿ, ವರದಿ ಸಲ್ಲಿಸಲು ರಚಿಸಲಾಗಿದ್ದ 7ನೇ ವೇತನ ಆಯೋಗದ ಅವಧಿ ಮಾರ್ಚ್ 15ಕ್ಕೆ ಮುಕ್ತಾಯವಾಗಿದ್ದು, ಶನಿವಾರ (ಮಾರ್ಚ್ 16) ಬೆಳಿಗ್ಗೆ ಈ ವರದಿ ಸಲ್ಲಿಕೆ ಮಾಡಲಾಗಿದೆ.

ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ ರಾವ್ ಅವರು ಇಂದು ಬೆಳಗ್ಗೆ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ತಮ್ಮ ವರದಿ ಸಲ್ಲಿಕೆ ಮಾಡಿದ್ದಾರೆ.

ಈ ಬಗ್ಗೆ ಸ್ವತಃ ಸಿಎಂ ಸಿದ್ದರಾಮಯ್ಯ ಕೂಡ ಟ್ವೀಟ್ ಮಾಡಿದ್ದು, ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ ರಾವ್ ಅಧ್ಯಕ್ಷತೆಯ ರಾಜ್ಯದ ಏಳನೇ ವೇತನ ಆಯೋಗದವರು ಇಂದು ತಮ್ಮನ್ನು ಭೇಟಿಯಾಗಿ ವರದಿ ಸಲ್ಲಿಸಿದರು. ಆಯೋಗದ ಸದಸ್ಯರಾದ ಪಿ.ಬಿ. ರಾಮಮೂರ್ತಿ, ಶ್ರೀಕಾಂತ್ ವನಹಳ್ಳಿ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ, ಹಣಕಾಸು ಇಲಾಖೆ ಕಾರ್ಯದರ್ಶಿ ಡಾ. ಪಿ.ಸಿ. ಜಾಫರ್, ವೇತನ ಆಯೋಗದ ಸದಸ್ಯ ಕಾರ್ಯದರ್ಶಿ ಹೆಪ್ಸಿಬಾರಾಣಿ ಕೊರ್ಲಪಾಟಿ ಉಪಸ್ಥಿತರಿದ್ದರು ಎಂದು ಟ್ವೀಟ್ ಮಾಡಿದ್ದಾರೆ.



ಅಂತೆಯೇ ರಾಜ್ಯದ 7ನೇ ವೇತನ ಆಯೋಗವು ಇಂದು ವರದಿಯನ್ನು ಸಲ್ಲಿಸಿದ್ದು ಮೂಲವೇತನದ ಶೇಕಡ 27.5 ರಷ್ಟು ಹೆಚ್ಚಳ ಮಾಡಲು ಶಿಫಾರಸು ಮಾಡಿದೆ. ವರದಿಯನ್ನು ಪರಿಶೀಲಿಸಿ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ. ವೇತನ ಆಯೋಗದ ಅವಧಿಯನ್ನು ಮೂರು ತಿಂಗಳು ವಿಸ್ತರಿಸಲಾಗಿತ್ತು. ಈ ಅವಧಿಯು ಮಾರ್ಚ್ 15ರಂದು ಮುಕ್ತಾಯಗೊಂಡಿದೆ. ನಿನ್ನೆ ನಾನು ಮೈಸೂರಿನಲ್ಲಿದ್ದ ಕಾರಣ ವರದಿ ಸ್ವೀಕರಿಸಲು ಸಾಧ್ಯವಾಗಿರಲಿಲ್ಲ. ಅದಕ್ಕಾಗಿ ಇಂದು ವರದಿಯನ್ನು ಸ್ವೀಕರಿಸಲಾಗಿದೆ. ವರದಿಯಲ್ಲಿ ಕನಿಷ್ಠ ಮೂಲವೇತನವನ್ನು ರೂ.17,000 ದಿಂದ ರೂ.27,000 ಕ್ಕೆ ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಇದರೊಂದಿಗೆ ಇನ್ನೂ ಅನೇಕ ಶಿಫಾರಸುಗಳಿದ್ದು ವರದಿಯನ್ನು ಆರ್ಥಿಕ ಇಲಾಖೆಗೆ ನೀಡಲಾಗಿದೆ. ಆರ್ಥಿಕ ಇಲಾಖೆಯು ವರದಿಯನ್ನು ಕೂಲಂಕುಷವಾಗಿ ಅಧ್ಯಯನ ಮಾಡಿದ ನಂತರ ನೀಡುವ ಸಲಹೆಗಳ ಆಧಾರದಲ್ಲಿ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಭರವಸೆ ನೀಡಿದ್ದಾರೆ.

ಅಂದಹಾಗೆ ಕರ್ನಾಟಕ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ್ ರಾವ್ ಅವರ ಅಧ್ಯಕ್ಷತೆಯಲ್ಲಿ 2022ರ ನವೆಂಬರ್ 19ರಂದು 7ನೇ ವೇತನ ಆಯೋಗ ರಚಿಸಲಾಗಿತ್ತು. 6 ತಿಂಗಳು ಗಡುವು ನೀಡಲಾಗಿತ್ತು. ಈ ಅವಧಿಯಲ್ಲಿ ಸರ್ಕಾರ ಶೇ 17ರಷ್ಟು ಮಧ್ಯಂತರ ಪರಿಹಾರ ಘೋಷಿಸಿತ್ತು. ಅದಕ್ಕಾಗಿ ವಾರ್ಷಿಕ 10 ಸಾವಿರ ಕೋಟಿ ರೂ ಹೆಚ್ಚುವರಿ ನೀಡಲಾಗಿತ್ತು. ಅವಧಿಯನ್ನು 2023 ಮೇ 15ರಿಂದ ನವೆಂಬರ್ 18ರವರೆಗೆ ವಿಸ್ತರಿಸಲಾಗಿತ್ತು. ನಂತರ 2ನೇ ಬಾರಿ ಇದೇ ಮಾರ್ಚ್ 15ರವರೆಗೆ ವಿಸ್ತರಿಸಲಾಗಿತ್ತು. ಆಯೋಗದ ಅವಧಿ ಮುಕ್ತಾಯವಾಗಿದ್ದು, ಆಯೋಗ ಅಧ್ಯಕ್ಷ ಮತ್ತು ಸದಸ್ಯರು ಮುಖ್ಯಮಂತ್ರಿಗೆ ವರದಿ ಸಲ್ಲಿಸಿದ್ದಾರೆ.

ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಗೆ ಮುನ್ನ ಸರ್ಕಾರಿ ನೌಕರರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡುವ ನಿರೀಕ್ಷೆ ಇದೆ' ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಕ್ಷರಿ ಹೇಳಿದರು.

# ಸಾಲ ಪಡೆದು 439.7 ಕೋಟಿ ರೂ. ವಂಚನೆ: ತನಿಖೆಗೆ ಸಹಕರಿಸುವಂತೆ ಶಾಸಕ ರಮೇಶ್ ಜಾರಕಿಹೊಳಿಗೆ ಹೈಕೋರ್ಟ್ ಸೂಚನೆ

ಬೆಂಗಳೂರು: ಸೌಭಾಗ್ಯಲಕ್ಷ್ಮಿ ಸಕ್ಕರೆ ಕಾರ್ಖಾನೆ ಅಭಿವೃದ್ಧಿಗೆ ಪಡೆದ ಸಾಲ ಮರುಪಾವತಿಸದ ಪ್ರಕರಣ ಸಂಬಂಧ ಸಿಐಡಿ ವಿಚಾರಣೆಗೆ ಸಹಕರಿಸುವಂತೆ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಸೂಚಿಸಿರುವ ಹೈಕೋರ್ಟ್, ಬಂಧನದಂತಹ ಕ್ರಮಕ್ಕೆ ಮುಂದಾಗುವ ಮುನ್ನ ನ್ಯಾಯಾಲಯದ ಅನುಮತಿ ಪಡೆಯುವುದು ಕಡ್ಡಾಯ ಎಂದು ಶುಕ್ರವಾರ ಆದೇಶಿಸಿದೆ.

ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್‌ಗೆ 439 ಕೋಟಿ ರೂಪಾಯಿ ಸಾಲ ಮರುಪಾವತಿಸದೆ ವಂಚಿಸಿರುವ ಆರೋಪ ಸಂಬಂಧ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಹಾಗೂ ಸಿಐಡಿ ನಡೆಸುತ್ತಿರುವ ತನಿಖೆ ರದ್ದುಪಡಿಸುವಂತೆ ಕೋರಿ ಸೌಭಾಗ್ಯಲಕ್ಷ್ಮಿ ಶುಗರ್ಸ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ರಮೇಶ್ ಜಾರಕಿಹೊಳಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರ ನೇತೃತ್ವದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಸಿಐಡಿ ಪ್ರಕರಣದ ತನಿಖೆ ನಡೆಸುತ್ತಿದ್ದು, ಅರ್ಜಿದಾರರ ಕೋರಿಕೆಯ ಮೇರೆಗೆ ಸಿಐಡಿಯನ್ನು ಪ್ರಕರಣದಲ್ಲಿ ಮೂರನೇ ಪ್ರತಿವಾದಿಯಾಗಿ ಸೇರ್ಪಡೆ ಮಾಡಲು ಅನುಮತಿಸಲಾಗಿದೆ. ಅಲ್ಲದೇ, ಪ್ರಕರಣ ನಿರ್ಧಾರಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಲು ಕೋರಿರುವ ಮನವಿಯನ್ನು ಪುರಸ್ಕರಿಸಲಾಗಿದೆ. ಇದನ್ನು ಸರ್ಕಾರದ ವಕೀಲರ ಜೊತೆಗೂ ಹಂಚಿಕೊಳ್ಳಬೇಕು. ಇನ್ನು ಪ್ರಕರಣಕ್ಕೆ ಸಂಬಂಧಿಸಿದಂತೆ ಅರ್ಜಿದಾರ/ಆರೋಪಿಗಳನ್ನು ನ್ಯಾಯಾಲಯದ ಅನುಮತಿ ಇಲ್ಲದೇ ತನಿಖಾ ಸಂಸ್ಥೆ ಬಂಧಿಸಬಾರದು. ಅರ್ಜಿದಾರ/ಆರೋಪಿಗಳು ತನಿಖೆಗೆ ಸಹಕರಿಸಬೇಕು" ಎಂದು ಪೀಠವು ನಿರ್ದೇಶಿಸಿದೆ.

ವಿಚಾರಣೆ ವೇಳೆ ಹೆಚ್ಚುವರಿ ಸರ್ಕಾರಿ



ಅಭಿಯೋಜಕ ಬಿ ಎನ್ ಜಗದೀಶ್ ಅವರು, ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಅರ್ಜಿದಾರರಿಗೆ ಸಿಐಡಿ ನೋಟಿಸ್ ಜಾರಿಗೊಳಿಸಿದೆ. ಆದರೆ, ಅರ್ಜಿದಾರರು ವಿಚಾರಣೆಗೆ ಹಾಜರಾಗುತ್ತಿಲ್ಲ. ಇದರಿಂದ ಪ್ರಕರಣದ ತನಿಖೆಗೆ ಮುಂದುವರಿಯದಂತಾಗಿದೆ ಎಂದು ಪೀಠದ ಗಮನಕ್ಕೆ ತಂದರು.

**ಏನಿದು ಪ್ರಕರಣ?**

ಬೆಳಗಾವಿಯ ಗೋಕಾಕದಲ್ಲಿರುವ ಸೌಭಾಗ್ಯಲಕ್ಷ್ಮಿ ಶುಗರ್ ಲಿಮಿಟೆಡ್‌ನಲ್ಲಿ ಯಂತ್ರೋಪಕರಣ ಅಳವಡಿಕೆ, ವಿಸ್ತರಣೆ ಮತ್ತು ನಿರ್ವಹಣೆಗಾಗಿ ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್‌ನಿಂದ 2011ರಿಂದ 2017ರ ಅವಧಿಯಲ್ಲಿ 232.88 ಕೋಟಿ ರೂಪಾಯಿ ಸಾಲ ಪಡೆಯಲಾಗಿತ್ತು. ಸಕಾಲಕ್ಕೆ ಸಾಲ ಮರು ಪಾವತಿಸದ ಹಿನ್ನೆಲೆಯಲ್ಲಿ ಅಸಲು ಹಾಗೂ ಬಡ್ಡಿ ಸೇರಿ 439.7 ಕೋಟಿ ರೂಪಾಯಿ ಆಗಿದೆ. ಸಾಲ ಪಡೆಯುವ ವೇಳೆ ಸಕ್ಕರೆ ಕಾರ್ಖಾನೆಗೆ ಜಾರಕಿಹೊಳಿ ವ್ಯವಸ್ಥಾಪಕ ನಿರ್ದೇಶಕರಾಗಿದ್ದರು.

ಆದರೆ, ಸಾಲ ಬಾಕಿಯಿರುವ ಅವಧಿಯಲ್ಲೇ ರಮೇಶ್ ಜಾರಕಿಹೊಳಿ ನಿರ್ದೇಶಕರ ಹುದ್ದೆಗೆ ರಾಜೀನಾಮೆ ಸಲ್ಲಿಸಿದ್ದಾರೆ. ಆ ಹುದ್ದೆಗಳಿಗೆ ಬೇರೆಯವರು ನೇಮಕಗೊಂಡಿದ್ದಾರೆ. ಈ ವಿಚಾರವನ್ನು ತಮ್ಮ ಗಮನಕ್ಕೆ ತಂದಿಲ್ಲ ಹಾಗೂ ಸಾಲ ಮರು ಪಾವತಿಸದೆ ವಂಚಿಸಲಾಗಿದೆ ಎಂದು ಆರೋಪಿಸಿ ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕರು ಜನವರಿ 5ರಂದು ಬೆಂಗಳೂರಿನ ವಿ.ವಿ ಪುರಂ ಠಾಣೆಗೆ ದೂರು ನೀಡಿದ್ದರು. ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ ರಾಜ್ಯ ಗೃಹ ಇಲಾಖೆ ಆದೇಶಿಸಿತ್ತು.

ಇದರಿಂದ ತಮ್ಮ ವಿರುದ್ಧದ ಎಫ್‌ಐಆರ್ ಹಾಗೂ ಸಿಐಡಿ ತನಿಖೆ ರದ್ದು ಕೋರಿ ರಮೇಶ್ ಜಾರಕಿ ಹೊಳಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಅರ್ಜಿ 2024ರ ಫೆಬ್ರವರಿ 9ರಂದು ವಿಚಾರಣೆಗೆ ಬಂದಿದ್ದಾಗ ಸಿಐಡಿಯ ಡಿವೈಎಸ್‌ಪಿ ಹಾಜರಾಗಿ, ರಮೇಶ್ ಜಾರಕಿಹೊಳಿ ಪುತ್ರನ ಮದುವೆ ಫೆಬ್ರವರಿ 27ರಂದು ನಡೆಯಲಿದೆ. ಅಲ್ಲಿಯವರೆಗೆ ಅವರ ವಿರುದ್ಧದ ಯಾವುದೇ ಬಲವಂತದ ಕ್ರಮಕ್ಕೆ ಮುಂದಾಗುವುದಿಲ್ಲ ಎಂದು ಹೈಕೋರ್ಟ್‌ಗೆ ತಿಳಿಸಿದ್ದರು.

# ಹೊರಗುತ್ತಿಗೆ ಸಿಬ್ಬಂದಿಗೆ ಕಾಲಕಾಲಕ್ಕೆ ವೇತನ ಪಾವತಿಸಿ: ಸಿಇಒ ರಾಹುಲ್ ಶಿಂಧೆ



ಬೆಳಗಾವಿ: ಹೊರಗುತ್ತಿಗೆ ಸಿಬ್ಬಂದಿಯನ್ನು ಅವರ ಕಾರ್ಯ ವೈಖರಿ ಆಧಾರದ ಮೇಲೆ ಮುಂದುವರಿಸುವುದು. ಅವರಿಗೆ ಸರಿಯಾದ ವೇಳೆಗೆ ವೇತನ ಪಾವತಿಸಲು ಕ್ರಮಕೈಗೊಳ್ಳಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಶನಿವಾರ (ಮಾ.16) ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಹೆಚ್ಚು ಹೆರಿಗೆಗಳು ದಾಖಲಾಗುವ ಆಸ್ಪತ್ರೆಗಳಲ್ಲಿ ಕೆಲವೊಂದು ಬಾರಿ ತಾಯಿ ಅವಶ್ಯವಿರುವ ರಕ್ತ ಒದಗಿಸಲು ರಕ್ತ ಸಂಗ್ರಹ ಘಟಕ ಸ್ಥಾಪಿಸಬೇಕು. ಈ ನಿಟ್ಟಿನಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲು ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು.

ಲಸಿಕಾ ಅಧಿಕಾರಿ ಡಾ.ಚೇತನ್ ಕಂಕನವಾಡಿ ಮಾತನಾಡಿ, ಈಚೆಗೆ ಜರುಗಿದ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಜಿಲ್ಲೆಯೂ ಶೇ.100 ರಷ್ಟು ಪ್ರಗತಿ ಸಾಧಿಸಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಮಹೇಶ್ ಕೋಣಿ, ಅಪರ ಜಿಲ್ಲಾ ಆರೋಗ್ಯ ಅಧಿಕಾರಿ ಎಸ್.ಎಸ್. ಗಡೇದ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ: ಅಭಿನಂದನೆ



ಶಿವಮೊಗ್ಗ: ಜಿಲ್ಲೆಯ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಗಳ ವಿಭಾಗದಲ್ಲಿ ಆಲ್ಕೊಳದಲ್ಲಿರುವ ದಿ ಶಿವಮೊಗ್ಗ ಮಲ್ಟಿಪರ್ಪಸ್ ಸೋಶಿಯಲ್ ಸರ್ವಿಸ್ ಸೊಸೈಟಿ ಚೈತನ್ಯ ಸಂಸ್ಥೆ ಹಾಗೂ ಕಲಾ ವಿಭಾಗ ಕ್ಷೇತ್ರದಲ್ಲಿ ಗೋಪಾಲಗೌಡ ಬಡಾವಣೆಯ ಕಲಾರ್ಪಣಂ ಸ್ಕೂಲ್ ಆಫ್ ಆರ್ಟ್ಸ್‌ನ ಸಿಂಧು ಎಸ್ ಇವರು 2023-24 ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾಗಿರುತ್ತಾರೆ.

ಮಾ.12 ರಂದು ಬೆಂಗಳೂರಿನ ಜವಾಹರ್ ಬಾಲಭವನ ಕಬ್ಬನ್ ಉದ್ಯಾನವನ ಇಲ್ಲಿ ನಡೆದ ರಾಜ್ಯ ಮಟ್ಟದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ರವರು ಪ್ರಶಸ್ತಿ ಪ್ರದಾನ ಮಾಡಿದರು. ಜಿಲ್ಲೆಯ ಪ್ರಶಸ್ತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಅಭಿನಂದಿಸಿದ್ದಾರೆ.

# ಸಂಪೂರ್ಣ 5 ವರ್ಷಗಳವರೆಗೂ ಗ್ಯಾರಂಟಿ ಯೋಜನೆಗಳು ಮುಂದುವರೆಯಲಿವೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: 5 ವರ್ಷಗಳ ಸಂಪೂರ್ಣ ಅವಧಿಯವರೆಗೂ ಗ್ಯಾರಂಟಿ ಯೋಜನೆಗಳು ಮುಂದುವರೆಯಲಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಹೇಳಿದರು.

ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಶುಕ್ರವಾರ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಮುಖ್ಯಮಂತ್ರಿಗಳು ಮಾತನಾಡಿದರು.

ನಾವು ಕೊಟ್ಟ ಮಾತಿನಂತೆ ಗ್ಯಾರಂಟಿ ಜಾರಿ ಮಾಡಿದ್ದೇವೆ. ಆದರೆ ಬಿಜೆಪಿಯವರು ಟೀಕೆ ಮಾಡಿದರು. ಆದರೆ ಅವರ ಟೀಕೆಗೆ ನಾವು ತಲೆ ಕೆಡಿಸಿಕೊಳ್ಳಲಿಲ್ಲ. ಗ್ಯಾರಂಟಿ ಬಗ್ಗೆ ಎಲ್ಲಾ ರೀತಿಯ ಆರೋಪ ಮಾಡಿದ್ದಾರೆ. ಗ್ಯಾರಂಟಿ ಯೋಜನೆ ಜಾರಿಯಾಗಲ್ಲ ಎಂದು ಅಪ್ಪಟ ಸುಳ್ಳು ಹೇಳಿದ್ದರು. ಆದರೆ, ನಾವು ಹೇಳಿದಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದು ಹೇಳಿದರು.

ನಮ್ಮ ಗ್ಯಾರಂಟಿಗಳು ಬಿಜೆಪಿಯವರ ಮನೆ ಬಾಗಿಲಿಗೂ ಮುಟ್ಟಿದೆ. ಬಿಜೆಪಿ ಮತದಾರರೂ ಕಾಂಗ್ರೆಸ್ ಗ್ಯಾರಂಟಿಗಳ ಫಲಾನುಭವಿಗಳಾಗಿದ್ದಾರೆ.

ಇವರನ್ನು ಅವಮಾನಿಸಬೇಡಿ. ನಮ್ಮ ಗ್ಯಾರಂಟಿಗಳು ನಾಡಿನ ಜನರ ಹಕ್ಕು. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಜಾರಿಯೇ ಆಗಲ್ಲ ಎಂದು ಮೋದಿ, ಬೊಮ್ಮಾಯಿ, ಆರ್.ಅಶೋಕ್, ವಿಜಯೇಂದ್ರ ಯಡಿಯೂರಪ್ಪ ಎಲ್ಲರೂ ಸುಳ್ಳಿನ ಮೇಲೆ ಸುಳ್ಳು ಹೇಳಿದ್ದರು.

ನಾವು ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಆಗ ಗ್ಯಾರಂಟಿಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂಬ ಹೊಸ ಸುಳ್ಳು ಹಬ್ಬಿಸಿದರು.



ಆದರೆ, ನಾವು ಬಜೆಟ್ ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹೊರತಾದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಹಣ ಮೀಸಲಿಟ್ಟೆವು. ಹೀಗಾಗಿ ಬಿಜೆಪಿಯ ಈ ಮಾತು ಕೂಡ ಸುಳ್ಳಾಯಿತು. ಹೀಗೆ ಬಿಜೆಪಿ ಮಂದಿ ಮೊದಲಿಗೆ ನಮ್ಮ ಗ್ಯಾರಂಟಿಗಳನ್ನು ಆಡಿಕೊಂಡು, ಸುಳ್ಳು ಹೇಳಿದರು.

ಆದರೆ ನಮ್ಮ ಗ್ಯಾರಂಟಿಗಳು ಯಶಸ್ವಿಯಾಗಿ ಜಾರಿ ಆದ ಬಳಿಕ ನಮ್ಮದೇ ಗ್ಯಾರಂಟಿ ಸ್ಕೀಂಗಳನ್ನು ಕದ್ದು ಅದಕ್ಕೆ ಮೋದಿ ಗ್ಯಾರಂಟಿ ಎಂದು ಹೆಸರಿಟ್ಟಿದ್ದಾರೆ ಎಂದು ತಿಳಿಸಿದರು.

ನಾವು ನುಡಿದಂತೆ ನಡೆದಿದ್ದೇವೆ, ಬಿಜೆಪಿ ಸುಳ್ಳುಗಳನ್ನೇ ನುಡಿದಿದ್ದಾರೆ. ತಾವು ಅಧಿಕಾರಕ್ಕೆ ಬಂದರೆ ಪ್ರತಿಯೊಬ್ಬ ಭಾರತೀಯರ ಖಾತೆಗೆ 15 ಲಕ್ಷ ರೂ ಹಾಕುವುದಾಗಿ ಮೋದಿ ಘೋಷಿಸಿದ್ದರು. 15 ಲಕ್ಷ ಇರಲಿ, 15 ಪೈಸೆನಾದ್ರೂ ಯಾರಿಗಾದರೂ ಹಾಕಿದ್ದಾರಾ? ಬಿಜೆಪಿಯವರಾಗಲಿ, ಮೋದಿಯವರಾಗಲೀ ಚುನಾವಣೆಯಲ್ಲಿ ಕೊಟ್ಟ ಭರವಸೆಗಳಲ್ಲಿ ಒಂದನ್ನಾದರೂ ಈಡೇರಿಸಿದ್ದಾರಾ? ಆಸ್ಪತ್ರೆ, ಕಾಲೇಜು, ಮಾರುಕಟ್ಟೆ, ರಸ್ತೆ, ನೀರು ಸೇರಿ ಮೈಸೂರಿನ ಎಲ್ಲಾ ಪ್ರಗತಿ ಕಾರ್ಯಕ್ರಮಗಳಿಗೆ ನಮ್ಮ ಸರ್ಕಾರ ನಿರಂತರವಾಗಿ ಅನುದಾನ ನೀಡುತ್ತಲೇ ಬಂದಿದೆ.

ಈ ಬಜೆಟ್ ನಲ್ಲೂ ಹಣ ಮೀಸಲಿಟ್ಟಿದ್ದೇವೆ. ಮೈಸೂರು ಜಿಲ್ಲೆಯ ಅಭಿವೃದ್ಧಿಗೆ ಮೈಸೂರು ಜನರ ಪ್ರಗತಿಗೆ ಬಿಜೆಪಿ ಇವತ್ತಿನವರೆಗೂ ಒಂದೇ ಒಂದು ಕಾರ್ಯಕ್ರಮವನ್ನೂ ಮಾಡಲೇ ಇಲ್ಲ ಏಕೆ? ಎಂದು ಪ್ರಶ್ನಿಸಿದರು.

ಗ್ಯಾರಂಟಿ ಯೋಜನೆಗಳು ಎಲ್ಲಾ ಜಾತಿಯ ಬಡವರು, ಎಲ್ಲಾ ಧರ್ಮದ ಬಡವರು ಅವರೆಲ್ಲರಿಗೂ ಕೂಡ ಈ ಯೋಜನೆಗಳು ತಲುಪುವ ಕೆಲಸ ಮಾಡುತ್ತೇವೆ. ಭಾರತೀಯ ಜನತಾ ಪಕ್ಷದ ಬಡವರಿಗೂ ಕೂಡ ಕೊಡುತ್ತಿದ್ದೇವೆ.

ನಾವು ಯಾವುದೇ ಧರ್ಮ ಜಾತಿ ಪಕ್ಷ ಪಂಗಡ ಎಂದು ಬೇಧ ಮಾಡುವುದಿಲ್ಲ. ಎಲ್ಲಾ ಮಹಿಳೆಯರು ಎಲ್ಲಾ ಬಡವರು ಅವರಿಗೆ ಸಹಾಯ ಮಾಡಬೇಕೆಂಬುದೇ ನಮ್ಮ ಗ್ಯಾರಂಟಿ ಯೋಜನೆಗಳ ಪ್ರಮುಖ ಉದ್ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ, ಮಾಜಿ ಸಚಿವ ಶಾಸಕ ತನ್ವೀರ್ ಸೇಠ್, ಗ್ಯಾರಂಟಿ ಯೋಜನೆಗಳ ಜಾರಿ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪ ಅಮರ್ನಾಥ್, ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಉಪಸ್ಥಿತರಿದ್ದರು.

ಚಾಮರಾಜ ಕ್ಷೇತ್ರದ ಶಾಸಕ ಹರೀಶ್ ಗೌಡ ಅವರು ಅಧ್ಯಕ್ಷತೆ ವಹಿಸಿದ್ದ ಬೃಹತ್ ಸಮಾವೇಶದಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಶಾಸಕರು ಉಪಸ್ಥಿತರಿದ್ದರು.

# ಆಲೋಚನೆಗೆ ಅರಿವಿನ ಎರವಲು ಇರಲಿ

ಆಲೋಚನೆಗಳು ಸ್ವಪರ ಹಿತಕರವಾಗಿರಬೇಕು ಏಕೆಂದರೆ ನಮ್ಮ ಆಲೋಚನೆಗಳೆ ನಮ್ಮ ವ್ಯಕ್ತಿತ್ವ ನಿರ್ಮಾಣದ ಮೂಲಗಳು. ನಿಜ ವ್ಯಕ್ತಿತ್ವ ಅಂದರೆ ಅದು ಭಾಹ್ಯ ಸ್ವರೂಪದಲ್ಲ ಅದು ಅಂತರ್ ಸ್ವರೂಪದ್ದು. ಹಾಗಾಗಿ ಪ್ರತಿಯೊಬ್ಬ ವ್ಯಕ್ತಿಯ ವ್ಯಕ್ತತ್ವ ನಿರ್ಮಾಣದಲ್ಲಿ ಅಂತರ್ಯದ ಆಲೋಚನೆಗಳು ಬಹುದೊಡ್ಡ ಪಾತ್ರವಹಿಸುತ್ತವೆ.

ನಮ್ಮ ಅಮೂರ್ತ ಆಲೋಚನೆಗಳು, ಒಂದಲ್ಲಾ ಒಂದು ರೀತಿಯ ಉತ್ಪಾದನೆಯ ಪ್ರಕ್ರಿಯೆಗಳು, ಕಲ್ಪನೆಯ ರೂವಾರಿಗಳಾಗಿರುತ್ತವೆ. ಕೆಲವು ಆಲೋಚನೆ ಗಳು ಅಲ್ಪಾಯುಷಿಯಾಗಿ ಕಣ್ಮರೆಯಾದರೆ ಇನ್ನೂ ಕೆಲವು ದೀರ್ಘಾಯುಷ್ಯ ಪಡದು ಕೊಂಡಿರುತ್ತವೆ. ಇಂತಹ ಆಲೋಚನೆಗಳು ಇಹಪರ ಪೂರಕವಾಗಿಯೂ ಅಥವಾ ಪೂರಕವಾಗಿರದೆಯೂ ಇರಬಹುದು, ಅತಿ ಆಲೋಚನೆ ಹೊಸ ಸಮಸ್ಯೆಯ ಸೃಷ್ಟಿಗೆ ಕಾರಣವೂ ಆಗಬಹುದು. ಇದೆಲ್ಲವೂ ನಮ್ಮ ಅರಿವಿನಾಳಕ್ಕೆ ಅವಲಂಭಿತವಾಗಿರುತ್ತದೆ. ನಮ್ಮ ಮಾತು, ಕೃತಿ, ನಡತೆಯ ಮೂಲಕ ಮೂರ್ತ ಸ್ವರೂಪ ಪಡೆದು ಸಾರ್ವತ್ರಿಕ ಪರಿಣಾಮಕ್ಕೆ ಎಡೆಮಾಡಿಕೊಡುತ್ತವೆ. ಹೀಗಾಗಿ ನಮ್ಮ ಆಲೋಚನೆಗಳು ಸಮಾಜದ ಕಲ್ಯಾಣ ಮತ್ತು ನಮ್ಮ ಅರ್ಥ ಪೂರ್ಣ ಅಸ್ತಿತ್ವಕ್ಕೆ ಅತ್ಯಗತ್ಯ ಸಾಧನಗಳು ಎಂದರೆ ತಪ್ಪಾಗಲಾರದು.

ವ್ಯಕ್ತಿಗತ ಇಲ್ಲವೆ ಸಾಮೂಹಿಕ ಸಮಸ್ಯ, ಸವಾಲುಗಳನ್ನು ಎದುರಿಸಲು, ಪೂರಕವಾದ ಪರಿಹಾರ ಅಥವಾ ತಾರ್ಕಿಕ ಅಂತ್ಯ ಕಾಣಲು ಆಲೋಚನಾ ಶಕ್ತಿಯೇ ಪ್ರಭಲ ಅಸ್ತ್ರವಾಗಿದೆ.



-ವೀರಣ್ಣ ಕಲಕೇರಿ
ಪತ್ರಕರ್ತ ಸಾಹಿತಿ
ಕೆಂಭಾವಿ

ನಮ್ಮ ವ್ಯಕ್ತಿತ್ವದ ನಿರ್ಮಾಣ ಅಥವಾ ಅಸ್ತಿತ್ವದ ಸ್ವರೂಪಕ್ಕೆ ಆಲೋಚನ ವಿಧ ಪ್ರಮುಖವಾದದ್ದು, ಇಲ್ಲಿ ದೂರಾಲೋಚನೆಯ ಮಾರ್ಗ ಒಂದಾದರೆ, ದುರಾಲೋಚನೆಯ ಮಾರ್ಗ ಬೇರೆಯದನ್ನೆ ಕಂಡು ಕೊಳ್ಳುತ್ತದೆ. ದ'ೂರಾ ಲ'ೋಚ'ನ'ಲ್ಲಿ ಅರಿವಿನ ಆಳವಿದೆ. ನಮ್ಮ ಆಲೋಚನೆಳು ನಮ್ಮ ಮಾತು, ಕೃತಿ, ಹವ್ಯಾಸ, ನಡತೆ ಹೀಗೆ ವಿವಿಧ ಬಾಹ್ಯ ಚಟುವಟಿಕೆಯ ಬಿತ್ತು ಬೀಜವಾಗಿದೆ. ಅದಕ್ಕಾಗಿಯೇ ನಿಮ್ಮ ಆಲೋಚನೆ ಹೇಗಿದೆಯೋ ಹಾಗೆ ನೀವಾಗುವಿರಿ ಎಂದು ಜ್ಞಾನಿಗಳು ಸಾರಿ ಹೇಳಿದ್ದು.

ಆಲೋಚನೆಯ ಹಿಂದಿನ ಶಕ್ತಿಯೇ ಬಯಕೆ. ಬಯಕೆ ಬೀಜವಾದರೆ ಆಲೋಚನೆ ಮೇಲುಗೊಬ್ಬರ ನೀರು ಇತ್ಯಾದಿಯಾಗಿ ಬೆಳವಣಿಗೆಗೆ ಸಾಥ ಕೊಡುತ್ತದೆ. ಹಾಗಾಗಿ

"ಭಾವ ವಿಚಾರಕ್ಕೆ ಮೂಲ
ವಿಚಾರ ಕರ್ಮಕ್ಕೆ ಮೂಲ
ಕರ್ಮ ನಾಮ ನಿರ್ನಾಮಕ್ಕೂ ಮೂಲ
ಭಾವದೊಡಲು ತಾನಾಗಿರಲು
ತಾನರಿಯಬೇಕೆಂದ ಸೃಷ್ಟಿಬಲೇಶ"

ಎನ್ನುವಂತೆ ಬಯಕೆಯ ವಿಧವರಿಯಲು ನಮ್ಮ ಅರಿವುನ ಎರವಲು ಪಡೆದು ಬಯಕೆಯ ಉದ್ದೇಶವರಿತು ಆಲೋಚನ ಲಹರಿ ಹರಿಯಬೇಕು ಇಲ್ಲವಾದರೆ ಸ್ವಪರ ಪೂರಕವಲ್ಲದ ಕರ್ಮವೆರಗಿ ದುರ್ವಿಧಿಗೆ ಆಹ್ವಾನ ನೀಡಿದಂತಾಗುವುದು.

# 5ನೇ ತರಗತಿಗೆ ಬೋರ್ಡ್ ಪರೀಕ್ಷೆ ನಡೆಸಲು ಶಿಕ್ಷಣ ಕಾಯ್ದೆಯಲ್ಲಿ ಅನುಮತಿಯಿಲ್ಲ: RTE ಅಸೋಸಿಯೇಷನ್

ಬೆಂಗಳೂರು: ರಾಜ್ಯ ಸರ್ಕಾರವು 5, 8, 9 ಮತ್ತು 11 ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆಗಳನ್ನು ನಡೆಸಲು ಅಧಿಸೂಚನೆಗಳನ್ನು ಹೊರಡಿಸುವ ಮೂಲಕ ಕಾನೂನಿನ ಕಾರ್ಯವಿಧಾನವನ್ನು ಅನುಸರಿಸದೆ ವಂಚನೆ ಮಾಡಿದೆ ಎಂದು ಆರ್‌ಟಿಇ ವಿದ್ಯಾರ್ಥಿಗಳು ಮತ್ತು ಪೋಷಕರ ಸಂಘ ಶುಕ್ರವಾರ ಕರ್ನಾಟಕ ಹೈಕೋರ್ಟ್‌ನಲ್ಲಿ ಪ್ರತಿಪಾದಿಸಿದೆ.

ಬೋರ್ಡ್ ಪರೀಕ್ಷೆಗಳನ್ನು ರದ್ದುಗೊಳಿಸಿ ಏಕ ಸದಸ್ಯ ನ್ಯಾಯಪೀಠ ನೀಡಿದ ಆದೇಶದ ವಿರುದ್ಧ ರಾಜ್ಯ ಸರ್ಕಾರ ಸಲ್ಲಿಸಿದ ಮೇಲ್ಮನವಿಗಳ ವಿಚಾರಣೆ ನಡೆಯಿತು.



ಈ ಸಂದರ್ಭದಲ್ಲಿ ಆರ್‌ಟಿಇ ಅಸೋಸಿಯೇಷನ್‌ನ ವಕೀಲರಾದ ಎ ವೇಲನ್ ಅವರು ನ್ಯಾಯಮೂರ್ತಿಗಳಾದ ಕೆ ಸೋಮಶೇಖರ್ ಮತ್ತು ರಾಜೇಶ್ ರೈ ಕೆ ಅವರ ವಿಭಾಗೀಯ ಪೀಠದ ಮುಂದೆ ವಾದ ಮಂಡಿಸಿದರು.

ಕರ್ನಾಟಕ ಶಿಕ್ಷಣ ಕಾಯ್ದೆಯ ನಿಬಂಧನೆಗಳ ಪ್ರಕಾರ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರುವ ಬೋರ್ಡ್ ಪರೀಕ್ಷೆಗಳನ್ನು ನಡೆಸಲು ನಿರ್ಧರಿಸುವ ಮೊದಲು ರಾಜ್ಯ ಸರ್ಕಾರವು ಪೋಷಕರು, ಶಿಕ್ಷಕರು ಮತ್ತು ಶಾಲೆಗಳನ್ನು ಸಂಪರ್ಕಿಸಬೇಕು ಎಂದು ವಕೀಲರು ವಾದ ಮಾಡಿದರು.

ಶಿಕ್ಷಣ ಹಕ್ಕು ಕಾಯಿದೆಯು 6 ರಿಂದ 14 ವರ್ಷದೊಳಗಿನ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆಗಳನ್ನು ಅನುಮತಿಸುವುದಿಲ್ಲ. ರಾಜ್ಯದ ನಿರ್ಧಾರವು ಕಾಯಿದೆಗೆ ಸಂಪೂರ್ಣ ನಿರ್ಲಕ್ಷ್ಯವಾಗಿದೆ. ಸೋಮವಾರದೊಳಗೆ ವಾದ ಮಂಡಿಸಲು ಕಾಲಾವಕಾಶ ನೀಡುವಂತೆ ಅರ್ಜಿದಾರರ ಪರ ವಕೀಲರು ಕೋರಿದರು. ಪ್ರಕರಣದ ತುರ್ತು ಪರಿಗಣಿಸಿ ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿತು.

# ಉಜ್ಬೇಕಿಸ್ತಾನ ಮಹಿಳೆ ಹತ್ಯೆ ಪ್ರಕರಣ: ಇಬ್ಬರು ಹಂತಕರ ಬಂಧನ

ಬೆಂಗಳೂರು: 27 ವರ್ಷದ ಉಜ್ಬೇಕಿಸ್ತಾನ್ ಮಹಿಳೆಯ ಕೊಲೆ ಪ್ರಕರಣವನ್ನು ಭೇದಿಸಿರುವ ಶೇಷಾದ್ರಿಪುರಂ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿಗಳನ್ನು ಅಸ್ಸಾಂ ಮೂಲದ ಅಮೃತ್ (22) ಮತ್ತು ರಾಬರ್ಟ್ ಪಿ (26) ಎಂದು ಗುರುತಿಸಲಾಗಿದೆ. ಇಬ್ಬರೂ ಸ್ಯಾಂಕಿ ರಸ್ತೆಯಲ್ಲಿರುವ ಹೋಟೆಲ್‌ನಲ್ಲಿ ಹೌಸ್‌ಕೀಪಿಂಗ್ ಸಿಬ್ಬಂದಿಗಳಾಗಿದ್ದರು.



ಪ್ರವಾಸಿ ವೀಸಾದ ಮೇಲೆ ನಾಲ್ಕು ದಿನಗಳ ಕಾಲ ಬೆಂಗಳೂರಿಗೆ ಬಂದಿದ್ದ ಜರೀನಾ ಜೆಪರೋವಾ ಬುಧವಾರ ರಾತ್ರಿ 11 ಗಂಟೆ ಸುಮಾರಿಗೆ ಹೋಟೆಲ್‌ನ ಎರಡನೇ ಮಹಡಿಯ ಕೊಠಡಿಯಲ್ಲಿ ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು.

ಚೆಕ್-ಔಟ್ ಸಮಯದ ನಂತರವೂ ಮಹಿಳೆ ಹೊರಗೆ ಬರದ ಕಾರಣ, ಹೋಟೆಲ್ ಸಿಬ್ಬಂದಿಗಳು ಫೋನ್ ಮಾಡಿದರೆ, ದೂರವಾಣಿ ಕರೆಗೆ ಪ್ರತಿಕ್ರಿಯಿಸದ ಕಾರಣ ಕೊಠಡಿ ತೆರಳಿದ್ದಾರೆ. ಮಹಿಳೆ ಬಾಗಿಲು ತೆರೆಯದ ಕಾರಣ ಮಾಸ್ಟರ್ ಕೀ ಬಳಸಿ ಬಾಗಿಲು ತೆರೆದಿದ್ದಾರೆ. ಈ ವೇಳೆ ಜರೀನಾ ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು.

ಪ್ರಕರಣ ಭೇದಿಸಲು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಇದರಂತೆ ಕೃತ್ಯದಲ್ಲಿ ಹೋಟೆಲ್ ಹೌಸ್ ಕೀಪಿಂಗ್ ಸಿಬ್ಬಂದಿ ಕೈವಾಡ ಖಚಿತವಾದ ಕೂಡಲೇ ಆ ಸಿಬ್ಬಂದಿಯ ಬೆನ್ನತ್ತಿದ್ದರು. ಕೃತ್ಯ ಎಸಗಿದ ಬಳಿಕ ಆರೋಪಿಗಳು ಮೆಜೆಸ್ಟಿಕ್ ಗೆ ಬಂದು ಕೇರಳ ಬಸ್ ನಲ್ಲಿ ಪರಾರಿಯಾಗಿದ್ದರು. ಅಂತಿಮವಾಗಿ ಕೇರಳದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ.

# ದೇವನಹಳ್ಳಿ: ಪೊಲೀಸರ ವಿರುದ್ಧ ವಕೀಲರ ಪ್ರತಿಭಟನೆ




ದೇವನಹಳ್ಳಿ: ಪ್ರಜೆಗಳಿಗೆ ನ್ಯಾಯ ಕೊಡಿಸಲು ಸಹೋದರತ್ವದಲ್ಲಿ ಕೆಲಸ ಮಾಡಬೇಕಿರುವ ಪೊಲೀಸರು, ಹೊಸಕೋಟೆಯಲ್ಲಿ ವಕೀಲರ ಮೇಲೆ ದಬ್ಬಾಳಿಕೆ ಮಾಡಿರುವುದು, ಸಾರ್ವಜನಿಕವಾಗಿ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದನ್ನು ಖಂಡಿಸಿ ದೇವನಹಳ್ಳಿ ವಕೀಲ ಸಂಘದ ಪದಾಧಿಕಾರಿಗಳು ಗುರುವಾರ ನ್ಯಾಯಾಲಯ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಉಪಾಧ್ಯಕ್ಷ ಆರ್.ಕೇಶವಮೂರ್ತಿ ಮಾತನಾಡಿ, 'ಪೊಲೀಸರು ಜನಸ್ನೇಹಿಯಾಗಿ ಕೆಲಸ ಮಾಡುವುದನ್ನು ಬಿಟ್ಟು ಗೂಂಡಗಳಂತೆ ಸಾರ್ವಜನಿಕ ಪ್ರದೇಶದಲ್ಲಿ ವರ್ತಿಸುವುದು ಅಕ್ಷಮ್ಯವಾಗಿದ್ದು, ಶಿಸ್ತಿನ ಇಲಾಖೆಯಲ್ಲಿ ಅವರಿಗೆ ಕಲಿಸಿದ್ದು ಇದೆಯೇ ಎಂಬಂತಹ ಪ್ರಶ್ನೆ ಮೂಡುತ್ತದೆ' ಎಂದು ಪ್ರಶ್ನಿಸಿದರು.

'ಹೊಸಕೋಟೆಯ ಅನುಗೊಂಡನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಗುಂಡೂರಿನಲ್ಲಿ ಜಮೀನಿನ ವ್ಯಾಜ್ಯಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದೆ ಎಂದು ಮನವರಿಕೆ ಮಾಡಿಕೊಡುತ್ತಿದ್ದ ವಕೀಲರನ್ನೇ ನೂಕಾಡಿ, ಕೊರಳಪಟ್ಟಿ ಹಿಡಿದ ಪೊಲೀಸ್ ಇನ್‌ಸ್ಪೆಕ್ಟರ್ ಚನ್ನೇಶ್ ಅಮಾನತು ಆಗಬೇಕು' ಎಂದು ಒತ್ತಾಯಿಸಿದರು.

'ನೆಲದ ಕಾನೂನಿನ ಅಡಿಯಲ್ಲಿ ಕೆಲಸ ಮಾಡುವುದನ್ನು ಪೊಲೀಸರು ಕಲಿಯಬೇಕಿದೆ. ಸಿವಿಲ್ ವ್ಯಾಜ್ಯಗಳಲ್ಲಿ ಮಧ್ಯಸ್ಥಿಕೆ ವಹಿಸಿ, ಶಾಂತಿಭಂಗಕ್ಕೆ ಪೊಲೀಸರೇ ಪ್ರಚೋದನೆ ನೀಡುತ್ತಿರುವುದು ನಾಚಿಕೆಗೇಡಿನ ಸಂಗತಿ' ಎಂದು ದೇವನಹಳ್ಳಿ ವಕೀಲ ಸಂಘ ಬೇಸರಿಸಿದೆ.

ನಾಗೇಶ್, ಡಿ.ಎಂ.ಮುನಿಯಪ್ಪ, ದಿನೇಶ್, ವೈ.ಎನ್.ಮಂಜುನಾಥ್, ಹೆಗ್ಗನಹಳ್ಳಿ ನವೀನ್ ಕುಮಾರ್ ಸೇರಿದಂತೆ ಪದಾಧಿಕಾರಿಗಳು ಇದ್ದರು.



# ಲೋಕ ಅದಾಲತ್ನಲ್ಲಿ 200 ಪ್ರಕರಣಗಳನ್ನು ಇತ್ಯರ್ಥ

ಧಾರವಾಡ: ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ ಪೀಠದಲ್ಲಿ ಮಾರ್ಚ್ 16 ರಂದು ಜರುಗಿದ ರಾಷ್ಟ್ರೀಯ ಲೋಕ ಅದಾಲತ್ದಲ್ಲಿ ಒಟ್ಟು 583 ಪ್ರಕರಣಗಳ ಪೈಕಿ 200 ಪ್ರಕರಣಗಳನ್ನು ರೂ.4,16,68,242/- ಮೊತ್ತಕ್ಕೆ ಇತ್ಯರ್ಥಪಡಿಸಲಾಯಿತು.

ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದ ಹಿರಿಯ ನ್ಯಾಯಮೂರ್ತಿ ಎಮ್. ಐ. ಅರುಣ್ ಅವರ ಮಾರ್ಗದರ್ಶನದಲ್ಲಿ ಏರ್ಪಡಿಸಲಾಗಿತ್ತು. ಅದಾಲತನಲ್ಲಿ ನ್ಯಾಯಮೂರ್ತಿಗಳಾದ ಇ. ಎಸ್. ಇಂದಿರೇಶ್ ಮತ್ತು ಅನಿಲ ಬಿ. ಕಟ್ಟಿ ಹಾಗೂ ಇವರೊಂದಿಗೆ ಲೋಕ ಅದಾಲತ್ನ ಸದಸ್ಯರುಗಳಾದ ಎಮ್. ಸಿ. ಹುಕ್ಕೇರಿ ಮತ್ತು ಜಿ. ಎಮ್. ಭಟ್ ಸೇರಿ ಒಟ್ಟು ಎರಡು ಪೀಠಗಳನ್ನು ಆಯೋಜಿಸಲಾಗಿತ್ತು.

ಸುಮಾರು 19 ವರ್ಷದ ಹಳೆಯ ದಿವಾಣಿ ಪ್ರಕರಣವನ್ನು ನ್ಯಾಯಮೂರ್ತಿ ಇ. ಎಸ್. ಇಂದಿರೇಶ್ ಹಾಗೂ ಎಮ್. ಸಿ. ಹುಕ್ಕೇರಿ, ಸದಸ್ಯರು ಮತ್ತು ಪಕ್ಷಗಾರರ ವಕೀಲರುಗಳಾದ ಪದ್ಮಜಾ ತಾಡಪತ್ರಿ ಮತ್ತು ಎಸ್. ಎಲ್. ಮಟ್ಟಿ, ಎಸ್. ಎ. ಸಂಡೂರ ಇವರ ಸಹಕಾರದಿಂದ ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಲಾಹಿತು. ಮುಂದುವರೆದ ಲೋಕ ಅದಾಲತ್ನಲಿ ಸುಮಾರು 5 ವರ್ಷದಿಂದ ದೂರವಾಗಿದ್ದ ದಂಪತಿಗಳ ವ್ಯಾಜ್ಯವನ್ನು ನ್ಯಾಯಮೂರ್ತಿ ಅನಿಲ ಬಿ. ಕಟ್ಟಿ ಮತ್ತು ಜಿ. ಎಮ್. ಭಟ್, ಸದಸ್ಯರು ರಾಜಿ ಸಂಧಾನದ ಮೂಲಕ ಒಂದು ಗೂಡಿಸಿದ್ದಾರೆ ಎಂದು ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿ ಧಾರವಾಡ ಪೀಠದ ಅಧೀಕ ವಿಲೇಖನಾಧಿಕಾರಿಗಳು (ನ್ಯಾಯಾಂಗ) ಮತ್ತು ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಸಭಾ ಚುನಾವಣೆ-2024: ಮಾದರಿ ನೀತಿ ಸಂಹಿತೆ ಜಾರಿ

## ಮುಕ್ತ, ನ್ಯಾಯಸಮ್ಮತ ಚುನಾವಣೆಗೆ ಸಕಲ ಸಿದ್ಧತೆ: ಜಿಲ್ಲಾಧಿಕಾರಿ ನೀತಿಶ ಪಾಟೀಲ

ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ಭಾರತ ಚುನಾವಣಾ ಆಯೋಗವು ಅಧಿಸೂಚನೆ ಹೊರಡಿಸಿದ್ದು ಜಿಲ್ಲೆಯಲ್ಲಿ ಮುಕ್ತ, ನ್ಯಾಯ ಸಮ್ಮತ ಚುನಾವಣೆ ಜರುಗಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆದ ಜಿಲ್ಲಾಧಿಕಾರಿ ನೀತಿಶ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಮಾ.16) ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ಅಧಿಸೂಚನೆ ಹೊರಡಿಸಿದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಮಾರ್ಚ್ 16 ರಿಂದ ಮಾದರಿ ನೀತಿ ಸಂಹಿತ ಜಾರಿಗೆ ಬಂದಿರುತ್ತದೆ.

ಚುನಾವಣಾ ಅಧಿಸೂಚನೆಯನ್ನು ಏಪ್ರೀಲ್ 12 ರಂದು ಹೊರಡಿಸಲಾಗುತ್ತಿದ್ದು, ಏಪ್ರೀಲ 19 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಏಪ್ರೀಲ 20 ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಏಪ್ರೀಲ್ 22 ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿರುತ್ತದೆ. ಮೇ. 7 ರಂದು ಮತದಾನ ಹಾಗೂ ಜೂನ್ 4 ರಂದು ಮತ ಏಣಿಕೆ ಜರುಗಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 4062210 ಮತದಾರರಿದ್ದು ಚಿಕ್ಕೋಡಿ ಲೋಕಸಭ ಮತಕ್ಷೇತ್ರದಲ್ಲಿ 865731 ಮಹಿಳಾ ಮತದಾರರು ಸೇರಿದಂತೆ ಒಟ್ಟು



1741758 ಮತದಾರರು, ಬೆಳಗಾವಿ ಲೋಕಸಭಾ ಮತಕ್ಷೇತ್ರದಲ್ಲಿ 955725 ಮಹಿಳಾ ಮತದಾರರು ಸೇರಿದಂತೆ ಒಟ್ಟು 1904099 ಮತದಾರರಿದ್ದು ಖಾನಾಪುರ ಹಾಗೂ ಕಿತ್ತೂರ ಮತಕ್ಷೇತ್ರದಲ್ಲಿ 204848 ಮಹಿಳಾ ಮತದಾರರು ಸೇ-ರಿದಂತೆ ಒಟ್ಟು 416353 ಮತದಾರ-ರಿರುತ್ತಾರೆ.

ಜಿಲ್ಲೆಯಲ್ಲಿ ಒಟ್ಟು 4524 ಮತಗಟ್ಟೆಗಳನ್ನು ತೆರೆಯಲಾಗಿದ್ದು ಚಿಕ್ಕೋಡಿ ಮತಕ್ಷೇತ್ರದಲ್ಲಿ ನಗರಪ್ರದೇಶದಲ್ಲಿ 419, ಗ್ರಾಮೀಣ ಪ್ರದೇಶಗಳಲ್ಲಿ 1477 ಮತಗಟ್ಟೆಗಳು ಸೇರಿದಂತೆ ಒಟ್ಟು 1896 ಮತಗಟ್ಟೆಗಳು, ಬೆಳಗಾವಿ ಲೋಕಸಭಾ ಮತಕ್ಷೇತ್ರದಲ್ಲಿ ಗ್ರಾಮೀಣ ಪ್ರದೇಶದಲ್ಲಿ 814, ನಗರ ಪ್ರದೇಶಗಳಲ್ಲಿ 1272 ಮತಗಟ್ಟೆಗಳು ಸೇರಿದಂತೆ ಒಟ್ಟು 2086 ಮತಗಟ್ಟೆಗಳು, ಖಾನಾಪುರ ಹಾಗೂ ಕಿತ್ತೂರ ಮತಕ್ಷೇತ್ರಗಳಲ್ಲಿ ಒಟ್ಟು 542 ಮತಗಟ್ಟೆಗಳನ್ನು ಸ್ಥಾಪಿಸಲಾಗಿರುತ್ತದೆ.

ಒಟ್ಟಾರೆ ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಶಾಂತ ರೀತಿಯಿಂದ ಮುಕ್ತವಾಗಿ, ನ್ಯಾಯ ಸಮ್ಮತವಾಗಿ ಹಾಗೂ ನಿಷ್ಪಕ್ಷವಾಗಿ ಜರುಗಿಸಲು ಹಾಗೂ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕ್ರಿಯಾಯತ್ಮಕವಾಗಿ ಕಾರ್ಯನಿರ್ವಹಿಸಲು ಜಿಲ್ಲೆಯ ಎಲ್ಲಾ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆಗಳನ್ನು ನಿರ್ದೇಶಿಸಲಾಗಿದ್ದು ಸಾರ್ವಜನಿಕರು ಸಹಕಾರ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ ಸಿ.ಇ.ಓ. ರಾಹುಲ ಶಿಂಧೆ, ಆಯ್.ಜಿ.ಪಿ. ವಿಕಾಶ ಕುಮಾರ ವಿಕಾಶ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ಡಿ.ಸಿ.ಪಿ. ರೋಹನ ಜಗದೀಶ, ಪ್ರೊಬೆಷನರಿ ಆಯ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತರಿದ್ದರು.

# ಬೆಳಗಾವಿ ನಗರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ: ಲಕ್ಷ್ಮಣರಾವ್ ಚಿಂಗಳೆ

ಬೆಳಗಾವಿ: ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಆಶೀರ್ವಾದದಿಂದ ಬೆಳಗಾವಿ ಬುಡಾ ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ್ದು, ಬೆಳಗಾವಿ ನಗರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ನೂತನ ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ತಿಳಿಸಿದರು.

ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರಿಂದ ಬುಡಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರ ಸಹಕಾರದಿಂದ ಬೆಳಗಾವಿ ಬುಡಾ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು ಸಂತಸ ತಂದಿದೆ ಎಂದರು.

ಇದೇ ವೇಳೆ ಬೆಳಗಾವಿ ಬುಡಾ ಅಧ್ಯಕ್ಷರಾಗಿ



ಅಧಿಕಾರ ಸ್ವೀಕರಿಸಿದ ಲಕ್ಷ್ಮಣರಾವ್ ಚಿಂಗಳೆ ಅವರನ್ನು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಪುಷ್ಪಗುಚ್ಛ ನೀಡಿ ಸತ್ಕರಿಸಿದರು.

ಶುಕ್ರವಾರ ಲಕ್ಷ್ಮಣರಾವ್ ಚಿಂಗಳೆ ಅವರನ್ನು ಬುಡಾ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಮುಖ್ಯಮಂತ್ರಿ ಸಿದ್ರಾಮಯ್ಯ ಆದೇಶ ಹೊರಡಿಸಿದ್ದರು.

ಈ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ್, ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಎಂ.ಜೆ, ರಾಜಾ ಸಲೀಂ, ಮಹಾವೀರ್ ಮೋಹಿತೆ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಇದ್ದರು.

# ಹೋಳಿ ಹಬ್ಬದ ಸಮಯದಲ್ಲಿ ವಿಶೇಷ ರೈಲುಗಳ ಸಂಚಾರ: ನೈರುತ್ಯ ರೈಲ್ವೆ



ಬೆಂಗಳೂರು: ಮುಂಬರುವ ಹೋಳಿ ಹಬ್ಬದ ಸಮಯದಲ್ಲಿ ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡಲು ವಿಶೇಷ ಎಕ್ಸ್‌ಪ್ರೆಸ್ ರೈಲುಗಳನ್ನು ಓಡಿಸಲು ನೈರುತ್ಯ ರೈಲ್ವೆ ನಿರ್ಧರಿಸಿದೆ.

ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ (ಎಸ್‌ಎಂವಿಟಿ) ಬೆಂಗಳೂರು-ಕೊಚುವೇಲಿ ನಿಲ್ದಾಣಗಳ ನಡುವೆ ಮಾರ್ಚ್ 23 ಮತ್ತು 30ರಂದು ರಾತ್ರಿ 11.55ಕ್ಕೆ ವಿಶೇಷ ರೈಲು ಎರಡು ಟ್ರಿಪ್ ಸಂಚರಿಸಲಿವೆ. ಮಾರ್ಚ್ 24, 31ರಂದು ರಾತ್ರಿ 10ಕ್ಕೆ ಕೊಚುವೇಲಿಯಿಂದ ವಾಪಸ್ ಹೊರಡಲಿವೆ.

ಎಸ್‌ಎಂವಿಟಿ ಬೆಂಗಳೂರು-ಕಣ್ಣೂರು ನಿಲ್ದಾಣಗಳ ನಡುವೆ ಮಾರ್ಚ್ 19 ಮತ್ತು 26ರಂದು ರಾತ್ರಿ 11.55ಕ್ಕೆ ವಿಶೇಷ ರೈಲು ಎರಡು ಟ್ರಿಪ್ ಸಂಚರಿಸಲಿವೆ. ಮಾರ್ಚ್ 20 ಮತ್ತು 27ರಂದು ರಾತ್ರಿ 8ಕ್ಕೆ ಕಣ್ಣೂರಿನಿಂದ ವಾಪಸ್ ಹೊರಡಲಿವೆ.

ಹುಬ್ಬಳ್ಳಿ ಸಿದ್ಧಾರೂಢ ಸ್ವಾಮೀಜಿ ರೈಲು ನಿಲ್ದಾಣ-ಅಹಮದಾಬಾದ್ ನಿಲ್ದಾಣಗಳ ನಡುವೆ ಮಾರ್ಚ್ 24ರಂದು ರಾತ್ರಿ 7.30ಕ್ಕೆ ಒಂದು ಟ್ರಿಪ್ ವಿಶೇಷ ಎಕ್ಸ್‌ಪ್ರೆಸ್ ರೈಲು ಸಂಚರಿಸಲಿದೆ. ಮಾರ್ಚ್ 25ರಂದು ರಾತ್ರಿ 9.25ಕ್ಕೆ ಅಹಮದಾಬಾದ್‌ನಿಂದ ವಾಪಸ್ ಹೊರಡಲಿದೆ.

# ದೊಡ್ಡಬಳ್ಳಾಪುರ: ಕನ್ನಡ ಬಳಕೆ ಜಾಗೃತಿ ಅಭಿಯಾನ

ದೊಡ್ಡಬಳ್ಳಾಪುರ: ಸರ್ಕಾರದ ಆದ-'ೇಶದಂತೆ ನಾಮಫಲಕಗಳಲ್ಲಿ ಶೇ 60ರಷ್ಟು ಕನ್ನಡಕ್ಕೆ ಆದ್ಯತೆ ನೀಡಬೇಕು ಎನ್ನುವ ನಿಯಮವನ್ನು ಕಡ್ಡಾಯವಾಗಿ ಪಾಲಿಸುವಂತೆ ಕನ್ನಡಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಗರದಲ್ಲಿ ಶುಕ್ರವಾರ ಕನ್ನಡ ನಾಮಫಲಕ ಜಾಗೃತಿ ಅಭಿಯಾನ ನಡೆಸಲಾಯಿತು.

ನಗರದಲ್ಲಿನ ಅಂಗಡಿ ಮುಂಗಟ್ಟುಗಳು, ವಾಣಿಜ್ಯ ಮಳಿಗೆಗಳು, ಬ್ಯಾಂಕ್ ಮತ್ತಿತರೆ ಕಡೆ ಕರಪತ್ರ ನೀಡುವ ಮೂಲಕ ಕನ್ನಡ ನಾಮಫಲಕಕ್ಕೆ ಆದ್ಯತೆ ನೀಡುವಂತೆ ಮನವಿ ಮಾಡಿದರು.

ಕನ್ನಡಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಎ.ನಂಜಪ್ಪ, ತಾಲೂಕು ಅಧ್ಯಕ್ಷ ನಾಗರಾಜು ಮಾತನಾಡಿ, ತಾಲ್ಲೂಕಿನಲ್ಲಿ ಹಲವಾರು ವರ್ಷಗಳಿಂದ



ರಾಜ್ಯದ, ಹಲವು ಭಾಷೆಯ ಎಲ್ಲ ಧರ್ಮದ ಜನರು ಇಲ್ಲಿ ತಮ್ಮ ಜೀವನೋಪಾಯಕ್ಕೆ ಒಂದಲ್ಲ ಒಂದು ರೀತಿಯ ಉದ್ಯೋಗ ಮಾಡಿಕೊಂಡಿದ್ದಾರೆ. ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದ ಕಾರ್ಖಾನೆಗಳಲ್ಲಿ ಮತ್ತು ಕಟ್ಟಡ ಕಾರ್ಮಿಕ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಆದರೆ ಕೈಗಾ-ರಿಕಾ ನಿಯಮದ ಪ್ರಕಾರ ಕನ್ನಡಿಗ-ರಿಗೆ ಸಿಗಬೇಕಾದ ಉದ್ಯೋಗಗಳು ಅನ್ಯ ರಾಜ್ಯದವರ ಪಾಲಾಗುತ್ತಿವೆ. ಇಲ್ಲಿ ಬಂದು ನೆಲೆಸಿರುವ ಬೇರೆ ರಾಜ್ಯದ ಜನ ಇಲ್ಲಿಯ ಭಾಷೆ, ಸಂಸ್ಕೃತಿ, ನೆಲ, ಜಲಕ್ಕೆ ಗೌರವ ಕೊಡುವುದು ಅವರ ಕರ್ತವ್ಯ. ಆದರೆ ಸ್ಥಳೀಯ ರಾಜಕೀಯ ನಾಯಕರ ಅಧಿಕಾರದ ಲಾಲಾಸೆಗೆ ನಾಡು, ನುಡಿ, ಜಲ, ಹೆಸರು ಹೇಳಿಕೊಂಡು ಅಧಿಕಾರ ಅನುಭವಿಸಿದವರು, ಊರಿಗೆ ಏನು ಮಾಡಿಲ್ಲ ಎಂದು ದೂರಿದರು.

ರಾಜ್ಯ ಸರ್ಕಾರ ಹೊರಡಿಸಿದ ನಾಮಫಲಕಗಳಲ್ಲಿ ಕನ್ನಡ ಭಾಷೆ ಶೇ 60ರಷ್ಟು ಕಡ್ಡಾಯ ಪಾಲನೆ ಮಾಡದವರ ವಿರುದ್ಧ ನಗರಸಭೆ ಅಧಿಕಾ-ರಿಗಳು ಅಂಗಡಿ ಪರವಾನಗಿ ಅಥ-'ವಾ ನವೀಕರಣ ಮಾಡುವಾಗ ಕನ್ನಡ ಕಡ್ಡಾಯದ ನಿಯಮ ತಿಳಿಸಬೇಕು. ನಿಯಮ ಉಲ್ಲಂಘಿಸಿದರೆ ಪರವಾನಗಿ ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

15 ದಿನಗಳ ಗಡುವು: ಕನ್ನಡಿಗರು ನಿಸ್ಸಹಾಯಕರು ಎಂದು ಅನ್ಯಭಾಷಿಕರು ತಮ್ಮ ಅಟ್ಟಹಾಸ ಮುಂದುವರಿಸಿದ್ದಾರೆ. ನಾಮಫಲಕಗಳಲ್ಲಿ ಸಂಪೂರ್ಣ ಕನ್ನಡ ಬಳಕೆ ಮಾಡಿದವರಿಗೆ ಅಭಿನಂದನೆ ತಿಳಿಸಿದ ಸಂಘಟನೆಗಳ ಮುಖಂಡರು, ನಿಯಮ ಪಾಲಿಸದವರಿಗೆ ಹದಿನೈದು ದಿನಗಳ ಕಾಲಾವಕಾಶ ನೀಡಿದ್ದಾರೆ. ನಿಯಮ ಪಾಲಿಸದೇ ಇದ್ದರೆ ಕಾನೂನು ಮೂಲಕ ತಕ್ಕ ಉತ್ತರ ನೀಡುವುದಾಗಿ ಎಚ್ಚರಿಕೆ ನೀಡಿದರು.

ಕನ್ನಡಪರ ಸಂಘಟನೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ತರದಾಳ ಶ್ರೀನಿವಾಸ್, ಉಪಾಧ್ಯಕ್ಷ ನಯಾಜ್ ಖಾನ್, ಕಾರ್ಮಿಕ ಘಟಕದ ಗಂಗರಾಜು, ಸಂಘಟನೆಗಳ ಮುಖಂಡ ಹರಿಕುಮಾರ್, ಪ್ರವೀಣ್‌ಕುಮಾರ್, ಗೌರಮ್ಮ, ಕುಮುದಾ, ನಂದಿನಿ, ದರ್ಶನ್, ವಿಶ್ವನಾಥ್, ಗಿರೀಶ್, ಮಹೇಶಪ್ಪ, ಭವಿಷ್ಯತ್, ಮಂಜುನಾಥ್, ಕೆಂಪೇಗೌಡ, ರಾಜು ಸಣ್ಣಕ್ಕಿ, ಶಿವಶಂಕರ್ ಇದ್ದರು.

# ಲೋಕಸಭಾ ಚುನಾವಣೆ: ಜಗದೀಶ ಶೆಟ್ಟರ್‌ಗೆ ಟಿಕೆಟ್; ಅತೃಪ್ತರ ಸಭೆ

ಬೆಳಗಾವಿ: ಬೆಳಗಾವಿ ಲೋಕಸಭೆ ಕ್ಷೇತ್ರದಿಂದ ಜಗದೀಶ ಶೆಟ್ಟರ್ ಅವ-ರಿಗೆ ಬಿಜೆಪಿ ಟಿಕೆಟ್ ಖಾತ್ರಿಯಾದ ಕಾರಣ ಟಿಕೆಟ್ ವಂಚಿತ ಮುಖಂಡರು ರಾಜ್ಯಸಭೆ ಮಾಜಿ ಸದಸ್ಯ, ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಪ್ರಭಾಕರ ಕೋರೆ ಅವರ ಮನೆಯಲ್ಲಿ ಶುಕ್ರವಾರ ಗೋಪ್ಯ ಸಭೆ ನಡೆಸಿದರು.

ಟಿಕೆಟ್ ಆಕಾಂಕ್ಷಿಗಳಾದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅನಿಲ ಬೆನಕೆ, ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ ಕವಟಗಿಮಠ, ಬೈಲಹೊಂಗಲದ ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಮತ್ತು ಅವರ ಬೆಂಬಲಿಗರು ತುರ್ತು ಸಭೆಯಲ್ಲಿ ಪಾಲ್ಗೊಂಡರು.

ಈ ಬಗ್ಗೆ ಪಕ್ಷದ ಹೈಕಮಾಂಡ್ ಮೇಲೆ ಒತ್ತಡ ತರಬೇಕು ಎಂದು ಆಕಾಂಕ್ಷಿಗಳು ಸಭೆಯಲ್ಲಿ ಆಗ್ರಹಿಸಿದ್ದಾರೆ' ಎಂದು ಮೂಲಗಳು ತಿಳಿಸಿವೆ. ಆದರೆ, ಇದನ್ನು ಯಾರೂ ಬಹಿರಂಗವಾಗಿ ಹೇಳಲಿಲ್ಲ.

ಸಭೆ ಬಳಿಕ ಸುದ್ದಿಗಾರರ ಜೊತೆ ಪ್ರಭಾಕರ ಕೋರೆ ಮಾತನಾಡಿ, 'ನಾನು



ಪಕ್ಷದ ಕೋರ್ ಕಮಿಟಿ ಸಭೆಗೆ ಹಾಜರು ಆಗಿರಲಿಲ್ಲ. ಪಕ್ಷ ಸಂಘಟನೆ ಕುರಿತಾಗಿ ಚರ್ಚಿಸಲು ಇಲ್ಲಿ ಸೇರಿದ್ದೇವಷ್ಟೇ. ಹೈಕಮಾಂಡ್ ಏನು ತೀರ್ಮಾನ ಕೈಗೊಳ್ಳುವುದೋ ನೋಡೋಣ. ಶೆಟ್ಟರ್‌ಗೆ ಟಿಕೆಟ್ ನೀಡುವುದಕ್ಕೂ, ನಾವು ಸೇರಿದ್ದಕ್ಕೂ ಸಂಬಂಧವಿಲ್ಲ' ಎಂದರು.

'ನಾವು ಯಾರನ್ನೂ ವಿರೋಧಿಸಲು ಸಭೆ ನಡೆಸಿಲ್ಲ' ಎಂದು ಈರಣ್ಣ ಕಡಾಡಿ ತಿಳಿಸಿದರು. ಶಾಸಕ ಅಭಯ ಪಾಟೀಲ, 'ಸ್ಥಳೀಯವಾಗಿ ಅನೇಕರು ಸಮರ್ಥ-ರಿದ್ದಾರೆ. ಸ್ಥಳೀಯರಿಗೆ ಕೊಡಬೇಕೆಂದು ಕಾರ್ಯಕರ್ತರ ಅಪೇಕ್ಷೆ. ರಾಷ್ಟ್ರೀಯ ನಾಯಕರು ಯಾರಿಗೆ ಟಿಕೆಟ್ ನೀಡುತ್ತಾರೆ ಎಂದು ಹೇಳುವವರೆಗೆ ಪ್ರತಿಕ್ರಿಯಿಸುವುದಿಲ್ಲ' ಎಂದರು.

ಪಕ್ಷದ ರಾಜ್ಯ ವಕ್ತಾರ ಎಂ.ಬಿ.ಝಿರಲಿ, ವಿರೂಪಾಕ್ಷ ಮಾಮನಿ, ರಾಜೇಂದ್ರ ಹರಕುಣಿ ಇದ್ದರು.

# 123 ಅಡಿ ಉದ್ದದ ಎಂಟಿಆರ್ ದೋಸೆಗೆ ಗಿನ್ನಿಸ್ ಗರಿ



ಬೆಂಗಳೂರು: ಸಂಸ್ಕರಿಸಿದ ಆಹಾರ ಪದಾರ್ಥಗಳ ತಯಾ-ರಿಕಾ ಸಂಸ್ಥೆಯಾದ ಎಂಟಿಆರ್ ಫುಡ್ಸ್ ತನ್ನ ನೂರನೇ ವರ್ಷಾಚರಣೆ ಅಂಗವಾಗಿ ಶನಿವಾರ ಲೋರ್ಮನ್ ಕಿಚನ್ ಸಲಕರಣೆಗಳ ಸಹಭಾಗಿತ್ವದಡಿ ತಯಾರಿಸಿದ 123 ಅಡಿ ಉದ್ದದ ದೋಸೆಯು ಗಿನ್ನಿಸ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಗಿಟ್ಟಿಸಿಕೊಂಡಿದೆ.

16.68 ಮೀಟರ್ (54 ಅಡಿ 8.69 ಇಂಚು) ಉದ್ದದ ದೋಸೆಯು ಇಲ್ಲಿಯವರೆಗಿನ ದಾಖಲಾಗಿತ್ತು. ನಗರದ ಬೊಮ್ಮಸಂದ್ರದಲ್ಲಿ ಇರುವ ಕಂಪನಿಯ ಫ್ಯಾಕ್ಟರಿಯಲ್ಲಿ ಈ ದೋಸೆ ತಯಾರಿಸಲು ತನ್ನದೇ ಉತ್ಪನ್ನವಾದ ಸಿಗ್ನೇಷರ್ ರೆಡ್ ಬ್ಯಾಟರ್ ಅನ್ನು ಬಳಸಿಕೊಂಡಿದೆ.

ಎಂಟಿಆರ್‌ನ ಕ್ಯುಸಿನ್ ಸೆಂಟರ್ ಆಫ್ ಎಕ್ಸಲೆನ್ಸ್ ಮಾರ್ಗದರ್ಶನದಡಿ ಆಹಾರ ತಜ್ಞರು ಮತ್ತು ಪಾಕಶಾಲೆಯ ಸಿಬ್ಬಂದಿ ಒಳಗೊಂಡ 75 ಬಾಣಸಿಗರ ತಂಡವು ದೋಸೆ ತಯಾರಿಸಿತು. ದಾಖಲೆ ನಿರ್ಮಿಸಿದ ಬಳಿಕ ಎಂಟಿಆರ್ ಉದ್ಯೋಗಿಗಳ ಜೊತೆಗೆ ಸ್ಥಳೀಯ ಶಾಲೆಗಳ ವಿದ್ಯಾರ್ಥಿಗಳು ಮತ್ತು ಸುತ್ತಮುತ್ತಲಿನ ಪ್ರದೇಶದ ಜನರಿಗೆ ಇದನ್ನು ಹಂಚಲಾಯಿತು.

ಈ ವೇಳೆ ಮಾತನಾಡಿದ ಎಂಟಿಆರ್‌ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಸುನಯ್ ಭಾಸಿನ್, 'ನಾವು 100 ಅಡಿ ಉದ್ದದ ದೋಸೆ ತಯಾರಿಸಲು ಪ್ರಯತ್ನಿಸಿದ್ದೆವು.

ಅದನ್ನು ಮೀರಿ 123 ಅಡಿ ಉದ್ದದ ದೋಸೆ ತಯಾರಿಸಿದ್ದೇವೆ. ಇದು ಹೆಮ್ಮೆಯ ಕ್ಷಣವಾಗಿದೆ' ಎಂದರು.

ದೋಸೆಯು ಮೊದಲಿನಿಂದಲೂ ಎಂಟಿಆರ್ ಪರಂಪರೆಯ ಭಾಗವಾಗಿದೆ. ಇಂದಿಗೂ ಗ್ರಾಹಕರು ಬಯಸುವ ಕಂಪನಿಯ ಪ್ರಮುಖ ಉತ್ಪನ್ನಗಳಲ್ಲಿ ಒಂದಾಗಿದೆ. ದಕ್ಷಿಣ ಭಾರತದ ಈ ಖಾದ್ಯವು ವಿಶ್ವದಾದ್ಯಂತ ಗುರುತಿಸಲ್ಪಟ್ಟಿದೆ ಎಂದು ಹೇಳಿದರು.

ಲೋರ್ಮನ್ ಕಿಚನ್ ಎಕ್ವಿಪ್ಮೆಂಟ್ ಪ್ರೈವೆಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಚಂದ್ರಮೌಳಿ ಮಾತನಾಡಿ, 'ವಿಶ್ವದ ಅತಿ ಉದ್ದನೆಯ ಈ ದೋಸೆ ತಯಾರಿಕೆಗೆ ಕಂಪನಿಯಿಂದ ವಿಶೇಷವಾದ ಇಂಡಕ್ಷನ್ ಸ್ಟೌ ನಿರ್ಮಿಸಲಾಗಿತ್ತು. ಇದು ಲೋರ್ಮನ್ ನಿರ್ಮಿಸಿದ ಅತಿ ಉದ್ದನೆಯ ಸ್ಟೌ ಕೂಡ ಆಗಿದೆ' ಎಂದು ತಿಳಿಸಿದರು.

# ಚಿಕ್ಕೋಡಿ ನೀರಿಗಾಗಿ ಉಮರಾಣಿ ಗ್ರಾಮಸ್ಥರು ಹೈರಾಣ

ಚಿಕ್ಕೋಡಿ: ತಾಲ್ಲೂಕಿನ ಉಮರಾಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉಮರಾಣಿ ಹಾಗೂ ಇಟ್ನಾಳ್ ಗ್ರಾಮಗಳಲ್ಲಿ, ಬೇಸಿಗೆ ಆರಂಭದಿಂದಲೇ ಕುಡಿಯುವ ನೀರಿಗೆ ಪರದಾಡುವ ಸ್ಥಿತಿ ಬಂದಿದೆ. ದಿನ ಬೆಳಗಾದರೆ ಮಹಿಳೆಯರು ಕೊಡಗಳನ್ನು ಹೊತ್ತು ಅಲೆಯುವುದು ಅನಿವಾರ್ಯವಾಗಿದೆ.

ಉಮರಾಣಿ ಗ್ರಾಮದಲ್ಲಿ 6,000 ಜನಸಂಖ್ಯೆ ಇದೆ. 12 ಜನ ಗ್ರಾಮ ಪಂಚಾಯಿತಿ ಸದಸ್ಯರಿದ್ದಾರೆ. ಗ್ರಾಮದ ತೋಟಪಟ್ಟಿ ವಸತಿಗಳಲ್ಲಿ ಕಳೆದ 10 ದಿನಗಳಿಂದ 4 ಟ್ಯಾಂಕರ್‌ನಿಂದ ಸರದಿಯಂತೆ ನೀರು ಪೂರೈಸಲಾಗುತ್ತಿದೆ.

ಪರಿಶಿಷ್ಟ ಜಾತಿ ಕಾಲೊನಿ, ಬಾಗೇವಾಡಿ ತೋಟ, ಕರೆನ್ನವರ ತೋಟ, ಮಖಣಿ ತೋಟ, ಪಾಶ್ಚಾಪೂರ ತೋಟದ ವಸತಿಗಳಿಗೆ ಎರಡು ದಿನಗಳಿಗೊಮ್ಮೆ



ಟ್ಯಾಂಕರ್ ನೀರು ಪೂರೈಕೆ ಮಾಡಲಾಗುತ್ತಿದೆ.

2022-23ನೇ ಸಾಲಿನಲ್ಲಿ ಪೂರ್ಣಗೊಳ್ಳಬೇಕಿದ್ದ ರೂ 2.6 ಕೋಟಿ ವೆಚ್ಚದ ಜಲ ಜೀವನ ಮಿಷನ್ ಕಾಮಗಾರಿ ಇನ್ನೂ ಮುಗಿದಿಲ್ಲ. ಹೀಗಾಗಿ ಜೆಜೆ-ಎಂ ಯೋಜನೆ ಗ್ರಾಮ ಪಂಚಾಯಿತಿಗೆ ಹಸ್ತಾಂತರಗೊಂಡಿಲ್ಲ. ಗ್ರಾಮದ 804 ನಲ್ಲಿಗಳಲ್ಲಿ ನೀರು ಬರಬೇಕಿತ್ತು. ಅಪೂರ್ಣಗೊಂಡ ಕಾಮಗಾರಿಯಿಂದ 400 ನಲ್ಲಿಗಳಿಗೆ ಮಾತ್ರ ಬರುತ್ತಿದೆ. ಅದರಲ್ಲೂ 1 ತಾಸು ಮಾತ್ರ ನೀರು ಬರುತ್ತದೆ. ಗ್ರಾಮದ ಅರ್ಧ ಭಾಗದ ಜನರಿಗೆ ಮನೆಮನೆ ಗಂಗೆ ಬರುತ್ತಿದ್ದರೆ, ಇನ್ನರ್ಧ ಊರು ಗಂಗೆಯನ್ನು ಹುಡುಕಿಕೊಂಡು ಹೋಗಬೇಕಾಗಿದೆ.

ಈ ಹಿಂದೆಯೇ ಕೊರೆಸಿದ 24 ಕೊಳವೆಬಾವಿಗಳು ಇದ್ದರೂ 9 ಬಂದ್ ಆಗಿ ತಿಂಗಳುಗಳೇ ಕಳೆದಿವೆ. 2 ಕೊಳವೆಬಾವಿಗಳಲ್ಲಿ ಒಂದು ಗಂಟೆಯವರೆಗೆ ಮಾತ್ರ ನೀರು ಬರುತ್ತದೆ. ಇನ್ನುಳಿದ ಕೊಳವೆಬಾವಿಗಳು ಬತ್ತಿ ಹೋಗಿವೆ. ಇಡೀ ದಿನ ಕಾದರೂ ಹತ್ತು ಕೊಡ ನೀರು ಸಿಗುವುದಿಲ್ಲ.

ಈ ಊರು ಎತ್ತರ ಪ್ರದೇಶದಲ್ಲಿರುವ ಕಾರಣ ಅಂತರ್ಜಲ ಮಟ್ಟ ಕಡಿಮೆ ಇದೆ. ಇದರ ನಡುವೆ ಪ್ರತಿ ದಿನ ಮೂರು ತಾಸು ಮಾತ್ರ ವಿದ್ಯುತ್ ಪೂರೈಕೆ ಆಗುತ್ತಿರುವುದು ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳಲು ಕಾರಣ.

ತಹಶೀಲ್ದಾರ್ ಚಿದಂಬರ ಕುಲಕರ್ಣಿ ಅವರ ಸೂಚನೆ ಮೇರೆಗೆ ಕಳೆದ 10 ದಿನಗಳಿಂದ 4 ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಇದು ಇದ್ಯಾವುದಕ್ಕೂ ಸಾಲುತ್ತಿಲ್ಲ. ತೋಟಪಟ್ಟಿಗಳಿಗೇ ಮೂರು ದಿನಕ್ಕೊಮ್ಮೆ ಟ್ಯಾಂಕರ್‌ನಿಂದ ನೀರು ಪೂರೈಕೆ ಮಾಡುತ್ತಿರುವುದರಿಂದ ಜನರು ನೀರು ಸಂಗ್ರಹಿಸಿ ಇಟ್ಟುಕೊಳ್ಳಲು ಹರಸಾಹಸ ಮಾಡುವಂತಾಗಿದೆ ಎನ್ನುತ್ತಾರೆ ಗ್ರಾಮಸ್ಥರು.

ಮಾರ್ಚ್ ತಿಂಗಳಲ್ಲಿಯೇ ಇಷ್ಟೊಂದು ಸಮಸ್ಯೆ ಇರುವಾಗ ಏಪ್ರಿಲ್, ಮೇ ತಿಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುವುದು ಹೇಗೆ ಎಂಬುದು ಜನರ ಚಿಂತೆ. ಅರ್ಧಕ್ಕೆ ನಿಂತ ಜಲ ಜೀವನ ಮಿಷನ್ ಕಾಮಗಾರಿ ಪೂರ್ಣಗೊಳಿಸಿ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂಬುದು ಅವರ ಬೇಡಿಕೆ.

## ಕರ್ನಾಟಕ ರಾಜ್ಯ ಮಹಿಳಾ ಆಯೋಗ: ಜಿಲ್ಲಾ ಮಟ್ಟದ ಸಭೆ

# ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು: ಡಾ.ನಾಗಲಕ್ಷ್ಮೀ ಚೌಧರಿ

ಬೆಳಗಾವಿ: ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಪ್ರದೇಶಗಳಲ್ಲಿ ಸಹಾಯವಾಣಿ ಸಂಖ್ಯೆ ಪೋಸ್ಟರ್, ಜಾಗೃತಿ ಕಾರ್ಯಕ್ರಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.


ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಮಾ.16) ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳಬೇಕು. 2023-24 ನೇ ಸಾಲಿನಲ್ಲಿ ಸವದತ್ತಿ, ಬೈಲಹೊಂಗಲ ತಾಲೂಕಿನಲ್ಲಿರುವ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡು ಬಂದಿವೆ. ಇವುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿ 3 ತಿಂಗಳಿಗೊಂದು ತಾಲೂಕಾ ಮಟ್ಟದ ಸಭೆ ಕರೆದು ಜಾಗೃತಿಗಳನ್ನು ಮೂಡಿಸಬೇಕು ಎಂದು ಹೇಳಿದರು.

ಸವದತ್ತಿ, ಗೋಕಾಕ್, ರಾಮದುರ್ಗ ತಾಲೂಕಿನ ಅತೀ ಹೆಚ್ಚು ಬಾಲ್ಯವಿವಾಹ ಪ್ರಕರಣಗಳು ಕಂಡು ಬಂದಿವೆ ಹಾಗಾಗಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳು ಆಯೋಜನೆ ಮಾಡಬೇಕು ಮತ್ತು ಅದಕ್ಕೆ ಪೂರಕವಾದ ದಾಖಲೆಗಳನ್ನು ಸಂಗ್ರಹಿಸಬೇಕು ಎಂದು ತಿಳಿಸಿದರು.

ಪ್ರತಿ ಅಂಗನವಾಡಿ ಕೇಂದ್ರ, ಶಾಲಾ ಕಾಲೇಜುಗಳಲ್ಲಿ ಬಾಲ್ಯ ವಿವಾಹ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಬೇಕು. ಸಖಿ ಒನ್ ಸ್ಟಾಪ್ 1098 ಸಹಾಯವಾಣಿ ಸಂಪರ್ಕ 24*7 ನಿರಂತರ ಚಾಲನೆಯಲ್ಲಿರಬೇಕು. ಸಖಿ ಸಹಾಯವಾಣಿ ಕೇಂದ್ರಗಳ ಸಿಬ್ಬಂದಿಗಳಿಗೆ ಕಳೆದ 6 ತಿಂಗಳಿಗೆ ವೇತನ ಪಾವತಿಸುವ ತೊಂದರೆಯಾಗುತ್ತಿದೆ. ಕೂಡಲೇ ಇದನ್ನು ಸಂಬಂಧಿಸಿದ ಸಚಿವರ ಗಮನಕ್ಕೆ ತಂದು ವೇತನ ಪಾವತಿಗೆ ಕ್ರಮ ವಹಿಸಲಾಗುವುದು ಎಂದರು.

ಉಜ್ವಲ ಮಹಿಳಾ ಸಂರಕ್ಷಣೆ ಕೇಂದ್ರಗಳಲ್ಲಿ



ಇತರೆ ರಾಜ್ಯಗಳಿಂದ ಬಂದಂತಹ ಮಹಿಳೆಯರನ್ನು ರಕ್ಷಣೆ ಮಾಡಿ ಅವ-ರಿಗೆ ಆಶ್ರಯ ನೀಡಲಾಗುತ್ತಿದೆ. ಹಣದ ಆಮಿಷದಿಂದ ಗಡಿ ಭಾಗದಲ್ಲಿನ ಹೆಚ್ಚಿನ ಮಹಿಳೆಯರು ಕಾಣೆಯಾಗಿರುವುದು ಕಂಡು ಬರುತ್ತದೆ. ಇದರ ಬಗ್ಗೆ ಜಿಲ್ಲಾಡಳಿತ ವರದಿ ಕೊಡಬೇಕು.

ಜಿಲ್ಲಾಡಳಿತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಾಗೃತಿ ಕಾರ್ಯಕ್ರಮಗಳು ಆಗಿರುವ ಕು-ರಿತು ದಾಖಲೆಗಳನ್ನು ನೀಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ತಿಳಿಸಿದರು.

ಜಿಲ್ಲೆಯ ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆ ಮತ್ತು ಮಕ್ಕಳ ರಕ್ಷಣೆಗಾಗಿ ಕಾವಲು ಸಮಿತಿಗಳನ್ನು ರಚಿಸಲಾಗಿದೆ. ಮಹಿಳೆಯರ ದೌರ್ಜನ್ಯ, ಬಾಲ್ಯವಿವಾಹ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಕಟ್ಟುನಿಟ್ಟಾಗಿ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿರುವ ವಸತಿ ನಿಲಯಗಳಲ್ಲಿ ಮಕ್ಕಳಿಗೆ ಜಾಗೃತಿ ಕಾರ್ಯಕ್ರಮಗಳ ಜೊತೆಗೆ ರಕ್ಷಣಾತ್ಮಕ ತರಬೇತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ.

ರೈಲ್ವೆ ಸ್ಟೇಷನ್, ಬಸ್ ನಿಲ್ದಾಣ, ಗಡಿ ಪ್ರದೇಶದಲ್ಲಿ, ಜನ ಹೆಚ್ಚಾಗಿ ಇರುವ ಪ್ರದೇಶಗಳಲ್ಲಿ ಕೂಡ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಎಸ್.ಪಿ ಭೀಮಾಶಂಕರ ಗುಳೇದ ಅವರು ತಿಳಿಸಿದರು.

ಕೌಟುಂಬಿಕ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರನ್ನು ಜಿಲ್ಲೆಯ ಮೂರು ಸೇವಾ ಕೇಂದ್ರಗಳಲ್ಲಿ ಆಶ್ರಯ ನೀಡಲಾಗುತ್ತಿದೆ. ಮೂರು ಸಂಸ್ಥೆಗಳ ನಿರ್ವಹಣೆಗೆ ಸರ್ಕಾರದಿಂದ ಅನುದಾನ ಒದಗಿಸಲಾಗುತ್ತಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿರುವ ಸಾಂತ್ವನ ಕೇಂದ್ರಗಳಿಗೆ ಪ್ರತಿ ಮೂರು ತಿಂಗಳಿಗೊಮ್ಮೆ ಅನುದಾನ ನೀಡಲಾಗುತ್ತಿದೆ. ವಿವಿಧ ಇಲಾಖೆಯ ಸಹಯಗದೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಸಾಂತ್ವಾನ ಕೇಂದ್ರದ ಸಮಾಲೋಚಕಿ ಲಲಿತಾ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶೃತಿ, ಎಸಿಪಿ ಸದಾಶಿವ ಕಟ್ಟಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್ ನಾಗರಾಜ, ವಿವಿಧ ಸಾಂತ್ವಾನ ಕೇಂದ್ರದ ಸಂಯೋಜಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಐಸಿಐಸಿಐ ಬ್ಯಾಂಕ್ ನಿಂದ ಕೆಎಲ್ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಗೆ ಡಯಾಲೈಸಿಸ ಯಂತ್ರಗಳ ಕೊಡುಗೆ

ಬೆಳಗಾವಿ: ನಗರದ ಕೆಎಲ್ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಗೆ ಐಸಿಐಸಿಐ ಬ್ಯಾಂಕಿನಿಂದ 2 ಡಯಾಲೈಸಿಸ್ ಯಂತ್ರಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಈ ಸಂದರ್ಬದಲ್ಲಿ ಮಾತನಾಡಿದ ಐಸಿಐಸಿಐ ಬ್ಯಾಂಕ ನ ವಿಭಾಗಿಯ ಮುಖ್ಯಸ್ಥರಾದ ಶ್ರೀ ಅಬ್ದುಲ ಅಜೀಝು ನಥಾಪಅವರು ಮಾತನಾಡುತ್ತ" ಕೆ ಎಲ್ ಇ ಸಂಸ್ಥೆಯ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯುತನ್ನ ಸೇವಾ ಮನೋಭಾವದಿಂದ ಸಾರ್ವಜನಿಕರಲ್ಲಿ ಮೆಚ್ಚುಗೆ ಪಾತ್ರವಾಗಿದೆ. ಈ ನಿಟ್ಟಿನಲ್ಲಿನಮ್ಮ ವತಿಯಿಂದ ಈ ಸೇವೆಗೆ ಕೈಜೋಡಿಸುವ




ಉದ್ದೇಶದಿಂದ ಈ ದೇಣಿಗೆಯನ್ನು ಸಲ್ಲಿಸುತ್ತಿದ್ದೇವೆ"ಎಂದುಅಭಿಮತ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕೆಎಲ್ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಮಾತನಾಡುತ್ತ "ಈಗಾಗಲೇ ನಮ್ಮಲ್ಲಿರೋಟರಿ-ಕೆಎಲ್ ಇ ಡಯಾಲೈಸಿಸ್ ಕೇಂದ್ರವುಚಾಲ್ತಿಯಲ್ಲಿದ್ದು ಸೇವಾ ಮನೋಭಾವದ ವೈದ್ಯ, ಡಯಾಲೈಸಿಸ್ ತಂತ್ರಜ್ಞರು, ದಾದಿಯರ ಶ್ರಮದ ಫಲವಾಗಿ ಸುಲಲಿತವಾಗಿ ಸಾಗುತ್ತಿದೆ.

ಇದನ್ನು ಗುರುತಿಸಿ ಇಂದು ಐಸಿಐಸಿಐ ಬ್ಯಾಂಕ್‌ನವರು ನಮ್ಮಆಸ್ಪತ್ರೆಗೆ 2 ಹೊಸ ಡಯಾಲೈಸಿಸ್ ಯಂತ್ರಗಳನ್ನು ಕೊಡುಗೆಯಾಗಿ ನೀಡಿದ್ದಾರೆ.ಈ ಸಂದರ್ಭದಲ್ಲಿ ಕೆಎಲ್ಇ ಪರಿವಾರ ಐಸಿಐಸಿಐ ಬ್ಯಾಂಕಿಗೆತುಂಬು ಹೃದಯ ಅಭಿನಂದನೆಗಳು ಎಂದುಕೃತಜ್ಞತೆಯನ್ನು ಸಲ್ಲಿಸಿದರು.

ಈ ಸಂದರ್ಬದಲ್ಲಿ ಐಸಿಐಸಿಐ ಬ್ಯಾಂಕ್ ನ ಸೇಲ್ಸ ವಿಭಾಗದ ಮುಖ್ಯಸ್ಥರಾದ ಶ್ರೀ ಈರಣ್ಣಾ ಉಮರಾನಿ ಅವರು ಮತ್ತು ಇನ್ನುಳಿದ ಐಸಿಐಸಿಐ ಬ್ಯಾಂಕಿನ ಸಿಬ್ಬಂದಿ ಮತ್ತುಆಸ್ಪತ್ರೆಯಅ-ರವಳಿಕೆ ವಿಭಾಗದ ಮುಖ್ಯಸ್ಥರಾದಡಾ. ಆರ್.ಜಿ ನೆಲವಿಗಿ, ಮೂತ್ರಕೋಶಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಅಂಜನೇಯಯಡೂರ, ನರ್ಸಿಂಗ್ ಮೇಲ್ವಿಚಾರಕರು, ಜನಸಂಪರ್ಕಾಧಿಕಾ-ರಿಗಳು, ಆಸ್ಪತ್ರೆಯ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಪ್ರೀತಿಯ ಹುಡುಗನ ಜೊತೆ ಸಪ್ತಪದಿ ತುಳಿದ ಗೂಗ್ಲಿ ಬೆಡಗಿ ಕೃತಿ ಕರಬಂಧ



ಬೆಂಗಳೂರು: ಎರಡು ವರ್ಷದಿಂದ ಪ್ರೀತಿಸುತ್ತಿದ್ದ ನಟಿ ಕೃತಿ ಕರಬಂಧ ಹಾಗೂ ಪುಲ್ಕಿತ್ ಜೋಡಿ ಹಸೆಮಣೆ ಏರಿದೆ.

ಸ್ಯಾಂಡಲ್‌ವುಡ್ ಮೂಲಕ ಸಿನಿ ಜೀವನ ಆರಂಭಿಸಿದ ಕೃತಿ ಬಾಲಿವುಡ್‌ಗೆ ಹೋಗೋಕೆ ತಡ ಆಗಲಿಲ್ಲ. ಬಾಲಿವುಡ್‌ನಲ್ಲಿ ಪುಲ್ಕಿತ್ ಜೊತೆ ಡೇಟಿಂಗ್ ಆರಂಭಿಸಿ ಎರಡು ವರ್ಷಗಳ ನಂತರ ಮದುವೆ ನಿರ್ಧಾರಕ್ಕೆ ಬಂದಿದ್ದಾರೆ.

ಕೃತಿ ಮದುವೆಯಾಗಿದ್ದು, ಇಂದು ಸಾಮಾಜಿಕ ಜಾಲತಾಣಗಳಲ್ಲಿ ಫೋಟೊ ಶೇರ್ ಮಾಡಿದ್ದಾರೆ. ಬಾಲಿವುಡ್ ಮಂದಿ ಈ ಜೋಡಿಗೆ ಶುಭಕೋರಿದ್ದಾರೆ.

## ಭಾನುವಾರ ಹಾಗೂ ಎಲ್ಲಾ ಸರ್ಕಾರಿ ರಜೆ ದಿನಗಳಂದು ಪ್ರವೇಶಾತಿಗೆ ಅವಕಾಶ

ಶಿವಮೊಗ್ಗ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮೈಸೂರು, ಶಿವಮೊಗ್ಗ ಪ್ರಾದೇಶಿಕ ಕೇಂದ್ರದಲ್ಲಿ 2023-24ನೇ ಶೈಕ್ಷಣಿಕ ಜನವರಿ ಸಾಲಿನಲ್ಲಿ ಯುಜಿಸಿಯ ಮಾನ್ಯತೆಯೊಂದಿಗೆ: 10.01.2024 ರಿಂದ ದಿನಾಂಕ:31.03.2024 ರ ವರೆಗೆ ಪ್ರಥ-ಮ ವರ್ಷದ ಬಿ.ಎ/ಬಿ.ಕಾಂ/ಬಿ.ಬಿ.ಎ/ಬಿ.ಸಿ.ಎ/ ಬಿ.ಎಸ್ಸಿ/ಬಿ.ಎಸ್.ಡಬ್ಲ್ಯೂ/ಬಿ.ಲಿಬ್, ಪದವಿ ಹಾಗೂ ಎಂ.ಎ / ಎಂ.ಕಾಂ, / ಎಂ.ಸಿ.ಎ / ಎಂ.ಎಸ್.ಡಬ್ಲ್ಯೂ / ಎಂ.ಲಿಬ್ ಮತ್ತು ಎಂ,ಎಸ್ಸಿ, ಮತ್ತು ಎಂ.ಬಿ.ಎ ಸ್ನಾತಕೋತ್ತರ ಪದವಿ ಹಾಗೂ ಪಿ.ಜಿ ಡಿಪ್ಲೇಮ ಮತ್ತು ಡಿಪ್ಲೇಮ ಹಾಗೂ ಸರ್ಟಿಫಿಕೇಟ್ ಕೋರ್ಸ್ಗಳ ಪ್ರವೇಶಾತಿ ಪ್ರಾರಂಭವಾಗಿದ್ದು, ವಿದ್ಯಾರ್ಥಿಗಳು ಪ್ರವೇಶಾತಿ ಅರ್ಜಿಗಳನ್ನು ನೇರವಾಗಿ ವಿಶ್ವವಿದ್ಯಾನಿಲಯದ ವೆಬ್ಸೈಟ್ನಲ್ಲಿ ಭರ್ತಿ ಮಾಡಿ ಆಲ್ಕೊಳ ಸರ್ಕಲ್ ಹತ್ತಿರ ಇರುವ ಕರಾಮುವಿ ಪ್ರಾದೇಶಿಕ ಕೇಂದ್ರ ಶಿವಮೊಗ್ಗ ಇಲ್ಲಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್ಸೈಟ್ **WWW.KSOUMYSURU.AC.IN** ಇಲ್ಲಿ ಹಾಗೂ ಸ್ಥಿರ ದೂರವಾಣಿ ಸಂಖ್ಯೆ 08182-250367 ಮೊ: 9164467131, 9739803295, 94807659057 ಸಂಪರ್ಕಿಸಬಹುದು.

ವಿಶೇಷ ಸೂಚನೆ: ಭಾನುವಾರ ಹಾಗೂ ಎಲ್ಲಾ ಸರ್ಕಾರಿ ರಜೆ ದಿನಗಳಂದು ಪ್ರವೇಶಾತಿಗೆ ಅವಕಾಶವಿದೆ. ಮಹಿಳಾ ಬಿ.ಪಿ.ಎಲ್ ವಿದ್ಯಾರ್ಥಿನಿಯರಿಗೆ 15% ಶುಲ್ಕ ವಿನಾಯಿತಿ ಹಾಗೂ ಆಟೋ ಹಾಗೂ ಕ್ಯಾಬ್ ಚಾಲಕರು ಹಾಗೂ ಅವರ ಮಕ್ಕಳಿಗೆ 25% ಶುಲ್ಕ ವಿನಾಯಿತಿ ಇರುತ್ತದೆ.

ಡಿಫೆನ್ಸ್ / ಎಕ್ಸ್-ಸರ್ವಿಸ್ಮನ್ಗಳಿಗೆ ಪ್ರವೇಶಾತಿಯಲ್ಲಿ 15% ಶುಲ್ಕ ವಿನಾಯಿತಿ ಇರುತ್ತದೆ.

ಕೋವಿಡ್ನಿಂದ ಮೃತರಾದ ಪೇಷಕರ ಮಕ್ಕಳಿಗೆ ಹಾಗು ದೃಷ್ಟಿಹೀನ ಅಂಧ ಮಕ್ಕಳಿಗೆ ಮತ್ತು ತೃತೀಯ ಲಿಂಗಿಗಳಿಗೆ ಪ್ರವೇಶಾತಿಯ ಪೂರ್ಣ ಶುಲ್ಕ ವಿನಾಯಿತಿ ಇದ್ದು ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ.

ಕೆ.ಎಸ್.ಆರ್ಟಿ.ಸಿ ನೌಕರರಿಗೆ ಶೇಕಡ 25% ಶುಲ್ಕ ವಿನಾಯಿತಿ ಇರುತ್ತದೆ ಎಂದು ಕೆಎಸ್‌ಓಯು ಪ್ರಾದೇಶಿಕ ನಿರ್ದೇಶಕರು ತಿಳಿಸಿದ್ದಾರೆ.

## ಪಾನಿಪೂರಿ ಸೇವಿಸಿ 19 ಮಕ್ಕಳು ಅಸ್ವಸ್ಥ



ದಾವಣಗೆರೆ: ಪಾನಿಪೂರಿ ಸೇವಿಸಿ 19 ಮಕ್ಕಳು ಅಸ್ವಸ್ಥಗೊಂಡಿರುವ ಘಟನೆ ದಾವಣಗೆರೆ ಜಿಲ್ಲೆಯಲ್ಲಿ ನಡೆದಿದೆ. ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಮಲೆಬೆನ್ನೂ-ರಿನಲ್ಲಿ ನಡೆದಿದೆ.

ರಂಜಾನ್ ಹಬ್ಬದ ಹಿನ್ನೆಲೆ ಉಪವಾಸ ಇದ್ದ ಮಕ್ಕಳು, ಉಪವಾಸ ಅಂತ್ಯ ಮಾಡಿ ಜಾಮೀಯಾ ಮಸೀದಿ ಬಳಿ ಪಾನಿಪೂರಿ ಸೇವನೆ ಮಾಡಿದ್ದಾರೆ ಎನ್ನಲಾಗಿದೆ.

ಈ ನಡುವೆ ಪಾನಿಪೂರಿ ಸೇವನೆ ಮಾಡಿದ ಬಳಿಕ ಮಕ್ಕಳ ಆರೋಗ್ಯದಲ್ಲಿ ಏರುಪೇರು ಉಂಟಾಗಿದೆ ಎನ್ನಲಾಗಿದೆ. ಇನ್ನೂ ಮಕ್ಕಳ ಆರೋಗ್ಯದಲ್ಲಿ ಏರುಪೇರು ಉಂಟಾದ ಬಳಿಕ ಎಲ್ಲರನ್ನೂ ದಾವಣಗೆರೆ ಖಾಸಗಿ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಮಾಹಿತಿ ತಿಳಿದು ಹರಿಹರ ತಹಶೀಲ್ದಾರ್ ಗುರು ಬಸವರಾಜ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಇನ್ನೂ ಇದಲ್ಲದೇ ಪಾನಿಪುರಿ ಅಂಗಡಿ ಬಿಟ್ಟು ಮಾರಾಟಗಾರ ಎಸ್ಕೇಪ್ ಆಗಿದ್ದಾನೆ ಎನ್ನಲಾಗಿದೆ. ಘಟನೆ ಬಗ್ಗೆ . ಮಲೆಬೆನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟ್ರಾನ್ಸ್‌ರೈಲ್ ಲೈಟಿಂಗ್ ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಕೆ

ಹುಬ್ಬಳ್ಳಿ: ಟ್ರಾನ್ಸ್ ರೈಲ್ ಲೈಟಿಂಗ್ ಕಂಪೆನಿ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಮತ್ತು ಬಿಎಸ್ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ಗೆ ಸಲ್ಲಿಸಿದೆ.

ಕಂಪನಿಯು ಪ್ರಮುಖ ಭಾರತೀಯ ಎಂಜಿನಿಯರಿಂಗ್, ಸಂಗ್ರಹಣೆ ಮತ್ತು ನಿರ್ಮಾಣ (ಇಪಿಸಿ) ಕಂಪನಿಗಳಲ್ಲಿ ಒಂದಾಗಿದ್ದು ಲ್ಯಾಟಿಸ್ ರಚನೆಗಳು, ಕಂಡಕ್ಟರ್‌ಗಳು ಮತ್ತು ಏಕಧ್ರುವಗಳಿಗೆ ಸಂಯೋಜಿತ ಉತ್ಪಾದನಾ ಸೌಲಭ್ಯಗಳನ್ನು ಹೊಂದಿದೆ. ಟಿಎಲ್ಎಲ್ ಜಾಗತಿ-ಕವಾಗಿ ಟರ್ನ್‌ಕೀ ಆಧಾರದ ಮೇಲೆ ಸಮಗ್ರ ಪರಿಹಾರಗಳನ್ನು ಒದಗಿಸುವಲ್ಲಿ ನಾಲ್ಕು ದಶಕಗಳ ದಾಖಲೆ ಹೊಂದಿದೆ ಮತ್ತು ವಿದ್ಯುತ್ ಪ್ರಸರಣ ಮತ್ತು ವಿತರಣಾ ವಲಯದಲ್ಲಿ ವಿಶ್ವಾಸಾರ್ಹ ಮತ್ತು ದೀರ್ಘಕಾಲದ ಪಾಲುದಾರನಾಗಿದೆ.

ಕಂಪನಿಯು ಆರಂಭಿಕ ಸಾರ್ವಜನಿಕ ಕೊಡುಗೆಯ ಮೂಲಕ ರೂ.2 ಮುಖಬೆಲೆಯ ಈಕ್ವಿಟಿ ಷೇರುಗಳನ್ನು ನೀಡುವ ಮೂಲಕ ಹಣ ಸಂಗ್ರಹಿಸಲು ಯೋಜಿಸಿದೆ. ಒಟ್ಟು ಕೊಡುಗೆಯ ಗಾತ್ರವು ರೂ.450 ಕೋಟಿ ವರೆಗಿನ ತಾಜಾ ಇಕ್ವಿಟಿ ಷೇರುಗಳನ್ನು ಒಳಗೊಂಡಿದೆ ಮತ್ತು ಅಜನ್ಮಾ ಹೋಲ್ಡಿಂಗ್ಸ್ ಪ್ರೈವೇಟ್ ಲಿಮಿಟೆಡ್‌ನಿಂದ 10,160,000 ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆ ಒಳಗೊಂಡಿದೆ.

ಕಂಪನಿಯು ಕೊಡುಗೆಯಿಂದ ಬರುವ ನಿವ್ವಳ ಆದಾಯವನ್ನು ರೂ250 ಕೋಟಿವರೆಗೆ ಹೆಚ್ಚುತ್ತಿರುವ ದುಡಿಯುವ ಬಂಡವಾಳದ ಅಗತ್ಯತೆಗಳಿಗೆ, ರೂ90.90 ಕೋಟಿವರೆಗೆ ಬಂಡವಾಳ ವೆಚ್ಚ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಾಕಿ ಮೊತ್ತವನ್ನು ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ. ಕ್ರಿಸಿಲ್ ವರದಿಯ ಪ್ರಕಾರ, ಮಾರ್ಚ್ 31, 2023 ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ ತನ್ನ ಪ್ರತಿದ್ವಂದ್ವಿ ಗಳಿಗಿಂತ ಕಾರ್ಯಾಚರಣೆಗಳ ತನ್ನ ಆದಾಯದಲ್ಲಿ ಟಿಎಲ್ಎಲ್ ಶೇಕಡಾ 35.1 ರಷ್ಟು ಅತ್ಯಧಿಕ ಬೆಳವಣಿಗೆಯನ್ನು ವರದಿ ಮಾಡಿದೆ.

ಇಂಗಾ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಎಚ್‌ಡಿ-ಎಫ್‌ಸಿ ಬ್ಯಾಂಕ್ ಲಿಮಿಟೆಡ್ ಮತ್ತು ಐಡಿಬಿಐ ಕ್ಯಾಪಿಟಲ್ ಮಾರ್ಕೆಟ್ಸ್ & ಸೆಕ್ಯುರಿಟೀಸ್ ಲಿಮಿಟೆಡ್ ಈ ಕೊಡುಗೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

## ಅಕ್ಷರ ಪಾಠ, ಜೀವನದ ಪಾಠ ಕಲಿಸುವ ದೇಗುಲವೇ ಶಾಲೆ: ಶಿಕ್ಷಕ ಎನ್.ಎನ್.ಕಬ್ಬೂರ

ಸವದತ್ತಿ: "ಶಾಲೆ ಎಂದರೆ ಅಕ್ಷರ ಜ್ಞಾನ ತಿಳಿಸುತ್ತಾ, ಅಭ್ಯಾಸ ಮಾಡಿಸುತ್ತಾ, ಜೀವನದಲ್ಲಿ ಎದುರಾಗುವ ಹಲವಾರು ಸಂದರ್ಭಗಳನ್ನು ನಿಭಾಯಿಸಲು ಹಾಗೂ ಸತ್ಯದ ದಾರಿಯಲ್ಲಿ ನಡೆಯಲು ನೈತಿಕತೆಯ ಪಾಠ ಕಲಿಸುವ ದೇಗುಲ, ಇಲ್ಲಿ ಅಕ್ಷರ ಪಾಠದ ಜೊತೆಗೆ ಜೀವನದ ಪಾಠವನ್ನೂ ಕಲಿಸಲಾಗತ್ತೆ" ಎಂದು ಶಿಕ್ಷಕ ಎನ್.ಎನ್.ಕಬ್ಬೂರ ತಮ್ಮ ಅಭಿಪ್ರಾಯ ಹಂಚಿಕೊಂಡರು.

ಪಟ್ಟಣದ ಸ.ಕಿ.ಪ್ರಾ ಕನ್ನಡ ಶಾಲೆ ನಂ-6 ರಲ್ಲಿ ಸರಸ್ವತಿ ಪೂಜೆ



ಹಾಗೂ ಐದನೇ ತರಗತಿ ಮಕ್ಕಳ ಬೀಳ್ಕೋಡುವ ಸಮಾರಂಭದಲ್ಲಿ ಅವರು ಮಾತನಾಡಿದರು. "ಇಂದಿನ ಮಕ್ಕಳು ನಾಳೆಯ ಉತ್ತಮ ನಾಗರಿಕರಾಗಲು ಅವರ ಜೀವನದಲ್ಲಿ ಶಾಲೆಯು ಭದ್ರ ಬುನಾದಿ ಹಾಕುತ್ತದೆ" ಎಂದು ಶಿಕ್ಷಕಿ ಎಮ್.ಆರ್.ಫಂಡಿ ತಮ್ಮ ಅನಿಸಿಕೆ ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿದ ವಿದ್ಯಾ ಗಾಣಗಿ ಮಾತನಾಡಿ, ನಿಮ್ಮ ಶಿಕ್ಷಕ-ರಿಗೆ, ನಿಮ್ಮ ಶಾಲೆಗೆ, ನಿಮ್ಮ ಕುಟುಂಬಕ್ಕೆ ಎಂದಿಗೂ ಕೆಟ್ಟ ಹೆಸರು ಬಾರದಂತೆ ಶಿಕ್ಷಣದಲ್ಲಿ ಯಶಸ್ವಿಯಾಗಿ ಎಂದು ಹಾರೈಸಿದರು.

ನಂತರ ವಿದ್ಯಾದೇವತೆ ಸರಸ್ವತಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು, ಮಕ್ಕಳು ಶಿಕ್ಷಕರ ಬಗೆಗಿನ ತಮ್ಮ ಅಭಿಪ್ರಾಯ ಹಂಚಿಕೊಂಡರು, ನಂತರ ಸಾಂಸ್ಕೃತಿಕ ಕಾರ್ಯಕ್ರಮ ಮಾಡಲಾಯಿತು. ಕಲಿಕೆಯಲ್ಲಿ ಉತ್ತಮ ಸಾಧನೆ ಮಾಡಿದ ಮಕ್ಕಳನ್ನು ಗುರುತಿಸಿ ಬಹುಮಾನ ನೀಡಲಾಯಿತು. ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಅಡುಗೆ ಸಿಬ್ಬಂದಿಯವರು, ಪಾಲಕ-ಪೋಷಕರು ಮತ್ತು ಮಕ್ಕಳು ಉಪಸ್ಥಿತರಿದ್ದರು.

## ವಿದ್ಯಾದಾನ ಅತ್ಯಂತ ಶ್ರೇಷ್ಠ: ಎಂ.ಎಲ್.ಸಿ ತಳವಾರ



ಬೆಳಗಾವಿ: ಎಲ್ಲ ದಾನಗಳಲ್ಲಿ ವಿದ್ಯಾದಾನ ಅತ್ಯಂತ ಶ್ರೇಷ್ಠವಾದದ್ದು. ಈ ಹಿನ್ನೆಲೆಯಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಸಾಬಣ್ಣ ತಳವಾರ ಹೇಳಿದರು.

ಆಂಜನೇಯ ನಗರ ಸರಕಾರಿ ಶಾಲೆಯ 2022-23ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಶಾಲಾ ಅಭಿವೃದ್ಧಿ ಕಾಮಗಾರಿಗೆ ಶುಕ್ರವಾರ ಚಾಲನೆ ನೀಡಿ ಮಾತನಾಡಿದರು.

ಸರಕಾರಿ ಶಾಲೆಗಳ ಅಭಿವೃದ್ಧಿಯಿಂದ ಬಡ ಮಕ್ಕಳಿಗೆ ಶಿಕ್ಷಣ ಸೌಲಭ್ಯ ದೊರೆತು ಅವರು ಪರಿವರ್ತನೆ ಹೊಂದಲು ದಾ-ರಿಯಾಗುತ್ತದೆ ಎಂದ ಅವರು ಶಿಕ್ಷಣದ ಅಗತ್ಯತೆ ಕುರಿತು ಸಂವಿಧಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ ಅವರ ಹೇಳಿಕೆಯನ್ನು ಸಾಬಣ್ಣವರ ಪ್ರತಿಪಾದಿಸಿದರು.


ನಗರಸೇವಕ ರಾಜಶೇಖರ ಡೋಣಿ, ಪತ್ರಕರ್ತ ಗೋಪಾಲ ಖಟಾವಕರ ಕಾರ್ಯಕ್ರಮದಲ್ಲಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸುಜೀತ, ಮೂಗಿ, ಮಸಳಿ, ಮಠದ, ಪಾಶ್ಚಾಪೂರ, ಕುಲಕರ್ಣಿ, ಮಿರ್ಜಿ, ಕಸ್ತೂರಿ ಭಾವಿ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಎಂ. ಎಲ್.ಸಿ ಸಾಬಣ್ಣ ತಳವಾರ, ಸಿಆರ್‌ಪಿ ಶೋಭಾ ಹಿರೇಮಠ ಇವರನ್ನು ಸತ್ಕರಿಸಲಾಯಿತು. ಮುಖ್ಯಾಧ್ಯಾಪಕಿ ಎಂ.ಎಂ. ಖೋದಾನಪೂರ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿ ಬಿಎಸ್ ಅವ್ವಕನವರ ನಿರೂಪಿಸಿದರು. ಕೊನೆಗೆ ಶಿಕ್ಷಕಿ ಎಸ್.ಎಚ್. ಬೋಗಾರ ವಂದಿಸಿದರು.

## ಹಸಿವು ಮುಕ್ತ ಕರ್ನಾಟಕ ಕಾಂಗ್ರೆಸ್ ಕನಸು ಯಶಸ್ವಿ: ವಿನಯ ನಾವಲಗಟ್ಟಿ

ಬೆಳಗಾವಿ: ಬೆಳಗಾವಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರಾಗಿ ವಿನಯ ನಾವಲಗಟ್ಟಿ ತಾಲ್ಲೂಕ ಪಂಚಾಯತಿ ಸಂಭಾಗಣದಲ್ಲಿ ಅಧಿಕಾರ ಸ್ವೀಕಾರ ಮಾಡಿದರು.

ಈ ವೇಳೆ ಅಧ್ಯಕ್ಷರಾದ ವಿನಯ ನಾವಲಗಟ್ಟಿ ಅವರು ಮಾತನಾಡಿ, ಚುನಾವಣೆಯ ಪೂರ್ವದಲ್ಲಿ ಕಾಂಗ್ರೆಸ್ ಘೋಷಿಸಿದ ಐದು ಗ್ಯಾರಂಟಿ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ಆಡಳಿತ ಬಂದ ಎರಡ್ಮೂರು ತಿಂಗಳಿನಲ್ಲಿ ರಾಜ್ಯದಲ್ಲಿ ಅನುಷ್ಠಾನಗೊಳಿಸಿದೆ. ಹಸಿವು ಮುಕ್ತ ಕರ್ನಾಟಕದ ಕಾಂಗ್ರೆಸ್ ಕನಸು ಯಶಸ್ವಿಯಾಗಿ ಸಾಗಿದೆ ಎಂದು ಹೇಳಿದರು.

ಹೆಮ್ಮೆಯ ಮುಖ್ಯಮಂತ್ರಿ ಸಿಎಂ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರದ ಯೋಜನೆಗಳಿಂದ ರಾಜ್ಯದ ಜನತೆ ಸುಖಃದಿಂದ ಜೀವನ ಸಾಗಿಸುತ್ತಿದ್ದಾರೆ. ಯುವಕರಿಂದ, ವೃದ್ಧರಿಗೂ ಈ ಯೋಜನೆಗಳು ಅನುಕೂಲವಾಗಿವೆ.



ಗೃಹಲಕ್ಷ್ಮೀ ಯೋಜನೆಗಳಿಂದ ಬಡ ಹೆಣ್ಣುಮಕ್ಕಳಿಗೆ ವಿದ್ಯಾಭ್ಯಾಸ ಸೇರಿದಂತೆ, ಅನೇಕ ಕೆಲಸಗಳಿಗೆ ಬಹಳಷ್ಟು ಅನುಕೂಲ ವಾಗಿದೆ ಎಂದರು.

ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರ ಸಹಕಾರದಿಂದ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು ಸಂತಸ ತಂದಿದೆ. ಆಯ್ಕೆಗೆ ಶ್ರಮಿಸಿದ ಆತ್ಮೀಯ ಸಚಿವ-ರಿಗೆ ಕೃತಜ್ಞತೆಗಳು ಸಲ್ಲಿಸುತ್ತೇನೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ-ಉಪಾಧ್ಯಕ್ಷರು:- ಬೆಳಗಾವಿ ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾಗಿ ಮಲ್ಲಪ್ಪ ಮುರಗೋಡ್, ಶೇಖರಪ್ಪ ಇಟ್ಟಿ, ಬಸವರಾಜ್ ನಾಯ್ಕ, ಅಮೋಲ್ ಬೆಣ್ಣೆ, ರುದ್ರಯ್ಯ (ಕಾಶಿ) ಎಂ. ಹಿರೇಮಠ ನೇಮಕಮಾಡಲಾಗಿದೆ. ಅಲ್ಲದೇ ಸದಸ್ಯರಾಗಿ ಅನಿಲಕುಮಾರ್ ದಳವಾಯಿ, ಮಹಾಂತೇಶ ಕೆ.ಕದಾಡಿ, ಬೈರು ಟಿ. ಕಾಂಬ್ಳೆ, ಸೂರ್ಯಕಾಂತ್ ಕೆ. ಕುಲಕರ್ಣಿ, ಗಂಗಪ್ಪ ಬಿ. ಹುರಕಡ್ಡಿ , ಮಹಾಂತೇಶ ಕಳ್ಳಿ ಬಡ್ಡಿ, ಶಿವಕುಮಾರ್ ರಾಠೋಡ್, ಜಿ.ಬಿ. ರಂಗನಗೌಡರ್, ಗೋಪಾಲ್ ದಳವಾಯಿ, ಶಾನುಲ್ ತಹಶೀಲ್ದಾರ್, ರಮೇಶ್ ಪಾಟೀಲ್, ಸಿದ್ಧಾರ್ಥ ಶಿಂಗೆ, ವಿಜಯ್ ಅಕ್ಕಿವಾಟೆ, ಅರ್ಜುನ್ ಬಂಡಗರ್, ಯೋಗಿತಾ ಆರ್. ಕಾಂಬ್ಳೆ ಆಯ್ಕೆಯಾಗಿದ್ದಾರೆ. ಇವರ ಅಧಿಕಾರಾವಧಿ ಎರಡು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇರಲಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಸರ್ಕಾರದ ಕಾರ್ಯದರ್ಶಿ ಡಾ. ಪ್ರಕಾಶ್ ಜಿ.ಸಿ ಆದ-ೀಶದಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ವಿನಯ ನಾವಲಗಟ್ಟಿ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಸನ್ಮಾನಿಸಿ, ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬುಡಾ ನೂತನ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಕೆಪಿಸಿಸಿ ಸದಸ್ಯ ಮಲ್ಲಗೌಡ ಪಾಟೀಲ, ಜಿಲ್ಲಾ ಕಾಂಗ್ರೆಸ್ ಪ್ರದಾನ ಕಾರ್ಯದರ್ಶಿ ಪ್ರದೀಪ್ ಎಂ ಜೆ, ಅನಂತಕುಮಾರ ಬ್ಯಾಕೋಡ್, ಸಿದ್ದಿಕ್ ಅಂಕಲಗಿ, ಮಹಾವೀರ ಮೋಹಿತೆ, ಆಯಿಶಾ ಸನದಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇತರರು ಇದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089